ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 144 ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 ಕೆಎ/ಎಸ್‌ಕೆ/ಸಿಟಿಎ–874/2024–2026 ಚಿತ್ರದುರ್ಗ ದಿನಾಂಕ: 25–12–2024 ಬುಧವಾರ ಪುಟ: 4 ಬೆಲೆ : ರೂ.2–00
Volume - 02 Issue - 144 RNI No: KARKAN/2023/88462 KA/SK/CTA-874/2024-2026 Chitradurga Date:25-12-2024 Wednesday Page: 4 Price: Rs. 2-00

ಒಳಪುಟದ ಸುದ್ದಿಗಳು

ಹೈನುಗಾರಿಕೆ ಮೂಲಕ ಆರ್ಥಿಕ ಸದೃಢತೆ ಪಡೆಯಲು ಶಾಸಕ ಟಿ.ರಘುಮೂರ್ತಿ ಸಲಹೆ 2

ಡಿ.29ರಂದು ಗೆಜೆಟೆಡ್ ಪ್ರೊಬೆಷನರ್ಸ್ ಮರು ಸ್ಪರ್ಧಾತ್ಮಕ ಪರೀಕ್ಷೆ 3

ಅಂಗವಿಕಲರಿಗೆ ಪ್ರತಿ ವರ್ಷ ನನ್ನ ಅನುದಾನದಲ್ಲಿ 20 ಲಕ್ಷ ರೂ. ಮೀಸಲು 4

ಸುದ್ದಿ, ಜಾಹಿರಾತಿಗೆ 9686622252

ಫಾಸ್ಟ್ ನ್ಯೂಸ್

ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳ ನೇಮಕಾತಿ: ಅಭ್ಯರ್ಥಿಗಳಿಗೆ ಸೂಚನೆ

» ಚಿತ್ರದುರ್ಗ

ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸಲಾಗುವ ಗೆಜೆಟೆಡ್ ಪ್ರೊಬೇಷನರ್ 384 ಹುದ್ದೆಗಳ ನೇಮಕಾತಿಯ ಪೂರ್ವಭಾವಿ ಮರುಪರೀಕ್ಷೆಯು ಇದೇ ಡಿ.29ರಂದು ಚಿತ್ರದುರ್ಗ ನಗರದ 25 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಈ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿದೆ. ಅಭ್ಯರ್ಥಿಗಳು ಕೆಪಿಎಸ್‌ಸಿಯಿಂದ ಡೌನ್‌ಲೋಡ್ ಮಾಡಿಕೊಂಡ ಮರು ಪರೀಕ್ಷೆಯ ಪ್ರವೇಶ ಪತ್ರ, ಭಾವಚಿತ್ರವಿರುವ ಮೂಲ ಗುರುತಿನ ಚೀಟಿ (ಚುನಾವಣೆ ಐಡಿ, ಆಧಾರ್ ಕಾರ್ಡ್, ಡ್ರೈವಿಂಗ್ ಲೈಸನ್ಸ್, ಪಾನ್‌ಕಾರ್ಡ್, ಪಾಸ್‌ಪೋರ್ಟ್, ಸರ್ಕಾರಿ ನೌಕರರ ಐಡಿ ಪರೀಕ್ಷಾ ಕೇಂದ್ರಗಳಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕು. ಅಭ್ಯರ್ಥಿಗಳು ಮೊಬೈಲ್, ಕ್ಯಾಲ್ಕುಕಲೇಟರ್, ಸ್ಮಾರ್ಟ್‌ವಾಚ್, ಬ್ಲೂಟೂತ್, ವೈಟ್ ಫ್ಲೂಯಿಡ್, ವೈರ್ ಲೆಸ್ ಸೆಟ್, ಪೇಪರ್, ಬುಕ್ಸ್ ಇತರೆ ಎಲೆಕ್ಟ್ರಾನಿಕ್ ಗ್ಯಾಜೆಟ್‌ಗಳನ್ನು ತರುವಂತಿಲ್ಲ. ಅಭ್ಯರ್ಥಿಗಳು ಶೂ, ಸಾಕ್ಸ್, ಸ್ವೆಟರ್ ಮತ್ತು ಜರ್ಕಿನ್, ತುಂಬು ತೋಳಿನ ಷರ್ಟ್ ಮತ್ತು ಫೇಸ್ ಮಾಸ್ಕ್ ಹಾಗೂ ಇತರೆ ವಸ್ತುಗಳನ್ನು ಧರಿಸುವುದನ್ನು ನಿಷೇಧಿಸಲಾಗಿದೆ. ಅಲ್ಲದೇ ಅಭ್ಯರ್ಥಿಗಳು ಸಾಧಾರಣ ಚಪ್ಪಲಿಯನ್ನು ಮಾತ್ರ ಧರಿಸಿ ಪರೀಕ್ಷೆಗೆ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಗ್ರಾಮ ಆಡಳಿತಾಧಿಕಾರಿ ಹುದ್ದೆ: ಜ.04 ರಂದು ದಾಖಲಾತಿಗಳ ಪರಿಶೀಲನೆ

» ಚಿತ್ರದುರ್ಗ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳಿಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂತಿಮ ಅಂಕಪಟ್ಟಿಯನ್ನು ಪ್ರಕಟಿಸಲಾಗಿದೆ. ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸೂಚಿಸಲಾಗಿದ್ದು, ಅದರಂತೆ ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 32 ಅನುಮೋದನೆಯಾಗಿರುವ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ, ಸಾಮಾನ್ಯ) ನಿಯಮಗಳನುಸಾರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸುವ ಸಂಬಂಧ ಪ್ರಾಧಿಕಾರ ನೀಡಿರುವ ಮೆರಿಟ್ ಪಟ್ಟಿಯಲ್ಲಿ 1:3 ಅನುಪಾತದಂತೆ ದಾಖಲಾತಿಗಳ ಪರಿಶೀಲನೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಜಾಲತಾಣ ೧ಣಣಥಿ://ಛಿಛಿಣಡಿಚಿಜಣಡಿರಚಿ.ಟಿಛಿಛಿಟಿ ನಲ್ಲಿ ಮತ್ತು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಡಿ.20ರಂದು ಅಧಿಸೂಚನೆಯಲ್ಲಿ ನಿಗದಿಯಾಗಿರುವ ಹುದ್ದೆಗಳ ಎದುರಾಗಿ 1:3 ಅನುಪಾತದಂತೆ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗಿದೆ. 2025ರ ಜನವರಿ 04 ರಂದು ಬೆಳಿಗ್ಗೆ 10.30 ಗಂಟೆಯಿಂದ 1:3 ಅನುಪಾತದಲ್ಲಿನ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆ ಮತ್ತು ವಿಕಲಚೇತನ ಅಭ್ಯರ್ಥಿಗಳ ವೈದ್ಯಕೀಯ ಪರೀಕ್ಷೆ ನಡೆಸಲಾಗುವುದು. ಜನವರಿ 15 ರಂದು ತಾತ್ಕಾಲಿಕ 1:1 ಆಯ್ಕೆ ಪಟ್ಟಿ ಮತು ಹೆಚ್ಚುವರಿ ಆಯ್ಕೆ ಪಟ್ಟಿ ಪ್ರಕಟಿಸಲಾಗುವುದು. ತಾತ್ಕಾಲಿಕ ಮತ್ತು ಹೆಚ್ಚುವರಿ ಆಯ್ಕೆಪಟ್ಟಿ ಕುರಿತಂತೆ ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ 2025ರ ಜನವರಿ 16 ರಿಂದ 23 ರೊಳಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಜ.27ರಂದು ಅಂತಿಮ ಆಯ್ಕೆಪಟ್ಟಿ ಮತ್ತು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗೆ ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಾರ್ಯಾಲಯ ಸಂಪರ್ಕಿಸಬಹುದು. ಆಕ್ಷೇಪಣೆಗಳನ್ನು ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಸಲಾಗುವುದು ಎಂದು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಕಡೆ ಕಾರ್ತಿಕ

» ಚಿತ್ರದುರ್ಗ

ನಗರದ ದೊಡ್ಡಪೇಟೆಯ ಜೈನ್ ದೇವಾಲಯದ ಹಿಂಭಾಗದ ಜವಳೇರ ಬೀದಿಯಲ್ಲಿನ ಬಂಡೆಯಲ್ಲಿ ನೆಲಸಿರುವ ಶ್ರೀ ಚೌಡೇಶ್ವರಿ ಅಮ್ಮನವರ ಕಡೇ ಕಾರ್ತಿಕ, ದೀಪಾರಾಧನೆ ಕಾರ್ಯಕ್ರಮವೂ ಡಿ. 27ರ ಶುಕ್ರವಾರ ಸಂಜೆ 7.30ಕ್ಕೆ ಹಮ್ಮಿಕೊಳ್ಳಲಾಗಿದೆ

ರಾಷ್ಟ್ರೀಯ ಗ್ರಾಹಕರ ದಿನಾಚರಣೆಯಲ್ಲಿ ಜಿಲ್ಲಾ ನ್ಯಾಯಾಧೀಶ ರೋಣ ವಾಸುದೇವ್

ವಸ್ತುವಿನ ಗುಣಮಟ್ಟ ತಿಳಿದಿರಬೇಕು

» ಚಿತ್ರದುರ್ಗ

ನಾವು ಯಾವುದೇ ವಸ್ತು ಖರೀದಿಸುವ ಮುನ್ನ ಅದರ ಗುಣಮಟ್ಟ, ಯೋಗ್ಯದ ದರದ ಕುರಿತು ಅರಿತು, ಮೋಸ ಹೋಗದಂತೆ ಗ್ರಾಹಕರು ಜಾಗೃತಿ ವಹಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರೋಣ ವಾಸುದೇವ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಾಶಾಸ್ತ್ರ ಇಲಾಖೆ, ಸರಸ್ವತಿ ಕಾನೂನು ಕಾಲೇಜು, ಎಸ್.ಜೆ.ಎಂ ಕಾನೂನು ಕಾಲೇಜು, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರದ ಸಹಯೋಗದಲ್ಲಿ ಗ್ರಾಹಕರ ನ್ಯಾಯಕ್ಕಾಗಿ ವರ್ಚುವಲ್ ವಿಚಾರಣೆಗಳು ಮತ್ತು ಡಿಜಿಟಲ್ ಹಾದಿ ಎಂಬ ಘೋಷವಾಕ್ಯದೊಂದಿಗೆ ಹಮ್ಮಿಕೊಂಡಿದ್ದ "ರಾಷ್ಟ್ರೀಯ ಗ್ರಾಹಕರ ದಿನಾಚರಣೆ" ಉದ್ಘಾಟಿಸಿ ಅವರು ಮಾತನಾಡಿದರು.

ನಿತ್ಯವೂ ನಾವು ಏನಾದರೊಂದು ವಸ್ತು ಖರೀದಿ ಹಾಗೂ ಬಳಕೆ ಮಾಡುತ್ತಿರುತ್ತೇವೆ. ನಾವು ಬಳಸುವ ವಸ್ತುಕೊಂಡುಕೊಳ್ಳುವಾಗ ನಾವುಕೊಟ್ಟಂತಹಮೌಲ್ಯಕ್ಕೆಅನುಗುಣವಾಗಿ ಗುಣಮಟ್ಟ ಖಾತ್ರಿ ಇದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕಾಗಿರುವುದು ಗ್ರಾಹಕರ ಕೆಲಸವಾಗಿದೆ ಎಂದು ಹೇಳಿದರು.

ಗ್ರಾಹಕರಿಗೆ ಯಾವುದೇ ರೀತಿಯಲ್ಲಿ ವಸ್ತುವನ್ನುಕೊಂಡಾಗ,ಸೇವೆಪಡೆಯುವಾಗ ಮೋಸವಾಗಬಾರದು. ಈ ನಿಟ್ಟಿನಲ್ಲಿ ಗ್ರಾಹಕರು ತಮಗೆ ಆದ ಅನ್ಯಾಯದ ವಿರುದ್ಧ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ, ರಾಜ್ಯ ಹಾಗೂ ರಾಷ್ಟ್ರೀಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಬಳಸಿಕೊಂಡು ತಮಗೆ ಆದ ಅನ್ಯಾಯವನ್ನು ಸರಿಪಡಿಸಿಕೊಳ್ಳಬಹುದಾಗಿದೆ. ನಾವು ನಮ್ಮ ಗ್ರಾಹಕರ ಹಕ್ಕುಗಳನ್ನು ತಿಳಿದುಕೊಳ್ಳಬೇಕು ಎಂದು ತಿಳಿಸಿದರು.1986ರ ಗ್ರಾಹಕರ ಸಂರಕ್ಷಣಾ ಕಾಯ್ದೆಯಲ್ಲಿ 4 ಅಧ್ಯಾಯಗಳು ಹಾಗೂ 31 ಕಲಂಗಳು ಮಾತ್ರ ಇದ್ದವು. ಈಗ 2019ರ ಕಾಯ್ದೆಯಲ್ಲಿ 8 ಅಧ್ಯಾಯಗಳು ಹಾಗೂ 107 ಕಲಂಗಳಿಗೆ ವಿಸ್ತರಿಸಲಾಗಿದೆ. 1986ರ ಗ್ರಾಹಕರ ಸಂರಕ್ಷಣಾ ಕಾಯ್ದೆಯಲ್ಲಿ ಸಾಕಷ್ಟು ಬದಲಾವಣೆ ಬೇಕಿತ್ತು. ಹಾಗಾಗಿ 2019ರಲ್ಲಿ ಹೊಸ ಕಾನೂನು ಅಳವಡಿಸಿಕೊಳ್ಳುವ ಮೂಲಕ ಅಮೂಲಾಗ್ರ ಬದಲಾವಣೆ ಮಾಡಲಾಯಿತು. ಕಳೆದ ಎರಡು–ಮೂರು ದಶಕದಲ್ಲಿ ನಮ್ಮ ಜೀವನಮಟ್ಟದಲ್ಲಿ ಬಹಳಷ್ಟು ಬದಲಾವಣೆಯಾಗಿದೆ. ನಾವು ಮೊದಲಿಗಿಂತಲೂ ಹೆಚ್ಚು ಜಾಗೃತರಾಗಿದ್ದೇವೆ ಎಂದು ಹೇಳಿದರು

ಅಪರಜಿಲ್ಲಾಧಿಕಾರಿಬಿ.ಟಿ.ಕುಮಾರಸ್ವಾಮಿ ಮಾತನಾಡಿ, ದಿನನಿತ್ಯವೂ ಒಂದಲ್ಲ ಒಂದು ವಸ್ತು ಖರೀದಿ ಮಾಡುತ್ತಿರುತ್ತೇವೆ. ಪ್ರತಿಯೊಂದು ವಸ್ತುವಿನ ಖರೀದಿ ಹಿಂದೆ ದುಡಿಮೆಯ ಶ್ರಮ ಇರುತ್ತದೆ. ಈ ಹಿನ್ನಲೆಯಲ್ಲಿ ಯಾವುದೇ ವಸ್ತುವಿನ ಮೌಲ್ಯ ಹಾಗೂ ಗುಣಮಟ್ಟ ಅರಿಯುವುದು ಬಹಳ ಮುಖ್ಯ ಎಂದು ಹೇಳಿದರು.

ಉತ್ಪಾದಕರುಇಲ್ಲವೆಮಾರಾಟಗಾರರಿಂದ ಅನ್ಯಾಯವಾದಾಗ ಗ್ರಾಹಕರ ಪರಿಹಾರ ವೇದಿಕೆಗಳಲ್ಲಿ ವ್ಯಾಜ್ಯ ಹೂಡಿ ಪರಿಹಾರ ಪಡೆದುಕೊಳ್ಳಬೇಕು. ಇದರಿಂದ ಜನರಿಗೆ ಹೆಚ್ಚಿನ ಜಾಗೃತಿ ಮೂಡಲಿದೆ. ಹಾಗಾಗಿ ನಾವು ಗ್ರಾಹಕರು ಈ ಕುರಿತು ಹೆಚ್ಚಿನ ಜಾಗೃತಿ ವಹಿಸಬೇಕು ಎಂದು ಸಲಹೆ ನೀಡಿದರು.ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಕೆ.ಪಿ.ಮಧುಸೂಧನ್ ಮಾತನಾಡಿ, ಭೂಮಿಯಲ್ಲಿ ವಾಸಮಾಡುವ ಪ್ರತಿಯೊಬ್ಬರು ಸಹ ಗ್ರಾಹಕರೇ. ಯಾವುದೇ ವಸ್ತು, ಸೇವೆಯನ್ನು ಹಣ ಕೊಟ್ಟು ನಾವು ಪಡೆದಾಗ ಗ್ರಾಹಕರಾಗುತ್ತೇವೆ. ಆ ಸೇವೆ, ವಸ್ತುವಿಗೆ ಸೂಕ್ತವಾದ ಬೆಲೆ, ಸಮರ್ಪಕ ಸೇವೆ ದೊರೆತಾಗ ಮಾತ್ರ ಗ್ರಾಹಕರು ತೃಪ್ತರಾಗುತ್ತಾರೆ ಎಂದರು.

ಪ್ರಸ್ತುತ ದಿನಗಳಲ್ಲಿ ಸಾಂಪ್ರದಾಯಿಕ ವ್ಯಾಪಾರ ಪದ್ದತಿಯಿಂದ ಆನ್‌ಲೈನ್ ವ್ಯಾಪಾರ ವ್ಯವಸ್ಥೆಗೆ ಬಂದಿದ್ದೇವೆ. ಇಂತಹ ಸಂದರ್ಭದಲ್ಲಿ ನಾವು ಕೊಡುವ ಹಣಕ್ಕೆ ಸೂಕ್ತ ನ್ಯಾಯ ಸಿಗುತ್ತಿದೆಯೋ, ಇಲ್ಲವೋ ಎಂಬುದನ್ನು ಆಲೋಚಿಸಬೇಕಿದೆ ಎಂದು ತಿಳಿಸಿದ ಅವರು, ಗ್ರಾಹಕರ ದಿನ ಆಚರಿಸುವ ಮೂಲಕ ಗ್ರಾಹಕರ ಹಕ್ಕು, ಜವಾಬ್ದಾರಿ ತಿಳಿಸುವುದು ಇಲಾಖೆಯ ಕರ್ತವ್ಯವೂ ಹೌದು ಎಂದು ಹೇಳಿದರು. ಉಪಪ್ರಧಾನ ಕಾನೂನು ನೆರವು ಅಭಿರಕ್ಷಕ ಎಂ.ಮೂರ್ತಿ ಅವರು "ಗ್ರಾಹಕರ ಸಂರಕ್ಷಣಾ ಕಾಯ್ದೆ" ವಿಷಯ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಅನಿಲ್ ಕುಮಾರ್, ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಡಾ.ಎಂ.ಹೆಚ್.ಸುಧಾದೇವಿ, ಎಸ್.ಜೆ.ಎಂ ಕಾನೂನು ಕಾಲೇಜಿನ ಪ್ರಾಂಶುಪಾಲಡಾ.ಎಸ್.ದಿನೇಶ್,ಕಾನೂನು ಮಾಪನಾಶಾಸ್ತ್ರ ಸಹಾಯಕ ನಿಯಂತ್ರಕ ವೆಂಕಟೇಶ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ಸೇರಿದಂತೆ ಆಹಾರ ನಿರೀಕ್ಷಕರು, ಆಹಾರ ಶಿರಸ್ತೆದಾರರು, ಕಾನೂನು ಕಾಲೇಜಿನ ವಿದ್ಯಾರ್ಥಿಗಳು ಇದ್ದರು. ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ನಿರೂಪಿಸಿದರು.

ಸಾಣೇಕೆರೆ : ಶಾಲಾ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸೌಲಭ್ಯ ಅಲಭ್ಯ ವಿರೋಧಿಸಿ ಪ್ರತಿಭಟನೆ

ಚಳ್ಳಕೆರೆ: ತಾಲ್ಲೂಕಿನ ಸಾಣಿಕೆರೆ ಗ್ರಾಮ ಪಂಚಾಯಿತಿ ಸೇರಿದಂತೆ ಹಲವಾರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೂರಾರು ವಿದ್ಯಾರ್ಥಿಗಳು ಪ್ರತಿನಿತ್ಯ ಚಳ್ಳಕೆರೆ ನಗರದ ಶಾಲಾ, ಕಾಲೇಜುಗಳಿಗೆ ಆಗಮಿಸಲು ಕೆಎಸ್‌ಆರ್‌ಟಿಸಿ ಬಸ್‌ಗಳನ್ನೇ ಅವಲಂಬಿಸಿದ್ದಾರೆ. ಆದರೆ, ಇತ್ತೀಚಿನ ದಿನಗಳಲ್ಲಿ ಬೆಳಗಿನ ಸಮುದಾಯದಲ್ಲಿ ಶಾಲಾ ಕಾಲೇಜು ಆಗಮಿಸುಗ ಕೆಎಸ್‌ಆರ್‌ಟಿಸಿ ಬಸ್‌ಗಳು ಇಲ್ಲಿ ನಿಲ್ಲದೆ ಹೋಗುತ್ತಿರುವುದು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗಿದ್ದು ಮಂಗಳವಾರ ರಾಷ್ಟ್ರೀಯ ಹೆದ್ದಾರಿ ತಡೆದು ಬಸ್‌ಗಳ ನಿಲುಗಡೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು. ಮಂಗಳವಾರ ಬೆಳಗಿನ ಸಮಯದಲ್ಲಿ ಈ ಭಾಗದಲ್ಲಿ ಸಂಚರಿಸುವ ಹಲವಾರು ಬಸ್‌ಗಳನ್ನು ರಾಷ್ಟ್ರೀಯ ಹೆದ್ದಾರಿ ಮೇಲ್ಸುತುವೆ ಮೇಲೆ ತಡೆದ ವಿದ್ಯಾರ್ಥಿಗಳು, ಗ್ರಾಮಸ್ಥರು ಪ್ರತಿನಿತ್ಯ ನಮಗೆ ಶಾಲಾ, ಕಾಲೇಜಿಗೆ ಹೋಗಲು ಸಾಧ್ಯವಾಗುತ್ತಿಲ್ಲ. ಯಾವುದೇ ಬಸ್‌ಗಳು ಕೆಳಭಾಗದಲ್ಲಿ ಚಲಿಸುತ್ತಿಲ್ಲ, ಎಲ್ಲವೂ ಮೇಲ್ಭಾಗದಲ್ಲಿ ಹೋದರೆ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಗತಿ ಏನು. ಪ್ರತಿನಿತ್ಯ ವಿದ್ಯಾರ್ಥಿಗಳು ಬಸ್‌ಗಳ ನಿಲುಗಡೆ ಇಲ್ಲದೆ ತಮ್ಮ ವಿದ್ಯಾಭ್ಯಾಸವನ್ನೇ ಮೊಟಕುಗೊಳಿಸುವ ಸ್ಥಿತಿ ತಲುಪಿದ್ದಾರೆಂದು ತಮ್ಮ ಅಳಲನ್ನು ತೋಡಿಕೊಂಡರು. ಕೆಎಸ್‌ಆರ್‌ಟಿಸಿ ಬಸ್ ಚಾಲಕ ಮತ್ತು ನಿರ್ವಾಹಕ ಕೂಡಲೇ ಚಳ್ಳಕೆರೆ ಡಿಪೋ ವ್ಯವಸ್ಥಾಪಕರಿಗೆ ಸಂಪರ್ಕಿಸಿ ಮಾತನಾಡಿದಾಗ ಸಾಣಿಕೆರೆ ಗ್ರಾಮದಲ್ಲಿ ಕಡ್ಡಾಯವಾಗಿ ಕೆಎಸ್‌ಆರ್‌ಟಿಸಿ ಬಸ್ ನಿಲುಗಡೆಗೆ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿ ಕ್ರಮ ಕೈಗೊಳ್ಳುವ ಭರವಸೆ ನೀಡಿದ ನಂತರ ವಿದ್ಯಾರ್ಥಿಗಳು ತಮ್ಮ ಮುಷ್ಕರವನ್ನು ವಾಪಾಸ್ ಪಡೆದರು.

ಚಳ್ಳಕೆರೆ ತಾಲ್ಲೂಕಿನ ಸಾಣೇಕೆರೆ ಬಳಿ 150(ಎ) ರಾಷ್ಟ್ರೀಯ ಹೆದ್ದಾರಿಯಲ್ಲಿ ಬಸ್ ನಿಲುಗಡೆ ಮಾಡಬೇಕೆಂದು ಬಸ್‌ಗಳನ್ನು ತಡೆದು ಪ್ರತಿಭಟಿಸಿದರು.

ಪ್ರಮುಖ ಸುದ್ದಿ

ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಜಿ. ಕಿಶನ್ ರೆಡ್ಡಿ ಸ್ಪಂದನೆ

ಚಿನ್ನದ ಗಣಿಗಾರಿಕೆ ಪುನರಾರಂಭಿಸಲು ಶಾಸಕ ಪಪ್ಪಿ ಮನವಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಇಂಗಳದಾಳಿನಿಂದ ಈ ಹಿಂದೆ ಕೈಗೊಳ್ಳಲಾಗುತ್ತಿದ್ದ ಚಿನ್ನದ ಗಣಿಗಾರಿಕೆ ಸ್ಥಗಿತಗೊಂಡಿದ್ದು, ಇದನ್ನು ಪುನರಾರಂಭಿಸುವಂತೆ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆಗಳ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಮನವಿ ಮಾಡಿದ್ದು, ಇದಕ್ಕೆ ಕೇಂದ್ರ ಸರ್ಕಾರ ಸ್ಪಂದಿಸಿದೆ.

ಈ ಕುರಿತಂತೆ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಕಳೆದ ಸೆಪ್ಟಂಬರ್ 09 ರಂದು ಮನವಿ ಪತ್ರ ಸಲ್ಲಿಸಿದ್ದರು. 1886 ರಲ್ಲಿ ಇಂಗಳದಾಳಿನಲ್ಲಿ ತಾಮ್ರದ ಗಣಿಗಾರಿಕೆ ಪ್ರಾರಂಭವಾಗಿತ್ತು, ಬಳಿಕ ಜಿಯಾಲಾಜಿಕಲ್ ಸರ್ವೆ ಆಫ್ ಇಂಡಿಯಾ ಅವರು ಕೈಗೊಂಡ ಸರ್ವೆ ಬಳಿಕ ಇಂಗಳದಾಳು, ಅಜ್ಜನಹಳ್ಳಿ ಮತ್ತು ಜಿ.ಆರ್. ಹಳ್ಳಿ ಸುತ್ತಮುತ್ತ ಚಿನ್ನದ ನಿಕ್ಷೇಪವಿರುವುದನ್ನು ಗುರುತಿಸಿತ್ತು.

1972 ರಲ್ಲಿ ಇಂಗಳದಾಳು ತಾಮ್ರದ ಘಟಕ ಪ್ರಾರಂಭಗೊಂಡು, ಬಳಿಕ ಇದನ್ನು ಹಟ್ಟಿ ಚಿನ್ನದ ಗಣಿಯೊಂದಿಗೆ ವಿಲೀನಗೊಳಿಸಲಾಗಿತ್ತು. 1994 ರಲ್ಲಿ ಅಜ್ಜನಹಳ್ಳಿ ಮತ್ತು ಜಿ.ಆರ್. ಹಳ್ಳಿ ಸುತ್ತಮುತ್ತ ಚಿನ್ನದ ನಿಕ್ಷೇಪ ಇರುವುದನ್ನು ಖಚಿತಪಡಿಸಿಕೊಂಡು, ಈ ಭಾಗದಲ್ಲಿ ಹಟ್ಟಿ ಚಿನ್ನದ ಗಣಿಯ ಸಹಯೋಗದಲ್ಲಿ 2002 ರವರೆಗೂ ಗಣಿಗಾರಿಕೆ ನಡೆಸಲಾಗಿತ್ತು. ಗಣಿ ತಜ್ಞರು ಮತ್ತು ಭೂವಿಜ್ಞಾನಿಗಳು ಅಜ್ಜನಹಳ್ಳಿ ಮತ್ತು ಜಿ.ಆರ್. ಹಳ್ಳಿ ಸುತ್ತಮುತ್ತ ಉತ್ತಮ ಪ್ರಮಾಣದಲ

ಫಾಸ್ಟ್ ನ್ಯೂಸ್

ಕಟ್ಟಡಗಳಲ್ಲಿ ಮಳೆನೀರು ಕೊಯ್ಲು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಸೂಚನೆ

» ದಾವಣಗೆರೆ

ನಗರದಲ್ಲಿ ಈಗಾಗಲೇ ಮಳೆ ನೀರು ಕೊಯ್ಲು ಕಡ್ಡಾಯವಾಗಿದೆ. ಆದರೂ ಬಹಳಷ್ಟು ಮನೆಗಳಲ್ಲಿ ಅಳವಡಿಸಿಕೊಂಡಿರುವುದಿಲ್ಲ, ಇದು ನೀರಿನ ಅಭಾವದ ಜೊತೆಗೆ ಅಂತರ್ಜಲಮಟ್ಟ ಕುಸಿತವಾಗಲು ಕಾರಣವಾಗಿದ್ದು ಕಟ್ಟಡಗಳಲ್ಲಿ ಮಳೆ ನೀರು ಕೊಯ್ಲು ವಿಧಾನವನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕೆಂದು ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕ ತಿಳಿಸಿದ್ದಾರೆ. ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿಯಮ ಉಲ್ಲಂಘಿಸಿ ಕಟ್ಟಡ ನಿರ್ಮಿಸುತ್ತಿರುವುದು ಹಾಗೂ ಕಟ್ಟಡದ ಮಾಲೀಕರು ಕಟ್ಟಡದಲ್ಲಿ ಮಳೆ ನೀರು ಕೊಯ್ಲಿನ ವಿಧಾನವನ್ನು ಅಳವಡಿಸದೇ ಇರುವುದು ಕಂಡುಬಂದಿದ್ದು, ಅಂತಹ ಕಟ್ಟಡದ ಮಾಲೀಕರಿಗೆ ದಂಡ ವಿಧಿಸಲಾಗುವುದು. ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದೊಡ್ಡ ಮನೆಗಳಿಗೆ (40*60 ಅಡಿ ಮೇಲ್ಪಟ್ಟ ನಿವೇಶನಗಳಲ್ಲಿನ ಕಟ್ಟಡ/ಜಿ+2 ಕಟ್ಟಡ) ರೂ 10,000 ಹಾಗೂ ಚಿಕ್ಕಮನೆಗಳಿಗೆ ರೂ 5,000 ರಂತೆ ದಂಡವನ್ನು ಕಟ್ಟಡದ ಮಾಲೀಕರಿಂದ ಪಾವತಿಸಿಕೊಳ್ಳಲಾಗುತ್ತದೆ ಎಂಬ ಸೂಚನೆ ಕೊಟ್ಟಿದ್ದಾರೆ. ನಗರ ಯೋಜನೆ ಶಾಖೆಯಿಂದ ಎಲ್.ಬಿ.ಪಿ.ಎ.ಎಸ್ ಆನ್‌ಲೈನ್ ತಂತ್ರಾಂಶದಲ್ಲಿ ಕಟ್ಟಡ ಪರವಾನಿಗೆ ಅರ್ಜಿಗಳನ್ನು ಸ್ವೀಕರಿಸಿ ವಸತಿ, ವಾಣಿಜ್ಯ ,ಕೈಗಾರಿಕೆ ಹಾಗೂ ಇತರೆ ಉದ್ದೇಶದ ಕಟ್ಟಡ ನಿರ್ಮಿಸಲು ಕಟ್ಟಡ ಪರವಾನಿಗೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಕಾವೇರಿ 2.0 ತಂತ್ರಾಂಶದೊಂದಿಗೆ ಇ-ಆಸ್ತಿ ತಂತ್ರಾಂಶ ಸಂಯೋಜನೆ

» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆ ವ್ಯಾಪ್ತಿಯ ಸ್ಥಿರಾಸ್ತಿಗಳ ಹಕ್ಕು ವರ್ಗಾವಣೆಗೆ ಇದೇ ಡಿಸೆಂಬರ್ 18 ರ ಸರ್ಕಾರದ ಆದೇಶದಂತೆ ನಿಗಧಿಪಡಿಸಲಾಗಿದ್ದ 45 ದಿನಗಳ ಅವಧಿಯನ್ನು 30 ದಿನಗಳಿಗೆ ಕಡಿತಗೊಳಿಸಿ ಕಾವೇರಿ–2.0 ತಂತ್ರಾಂಶದೊಂದಿಗೆ ಇ– ಆಸ್ತಿ ತಂತ್ರಾಂಶವನ್ನು ಸಂಯೋಜನೆಗೊಳಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕ ತಿಳಿಸಿದ್ದಾರೆ. ಸಂಯೋಜನೆಗೋಳಿಸಿದ ದಿನಾಂಕದಿಂದ ನೋಂದಾವಣೆಯಾಗಿರುವ ದಸ್ತಾವೇಜುಗಳಿಗೆ ಹಾಗೂ ಹಕ್ಕು ವರ್ಗಾವಣೆಗಾಗಿ ಮಹಾನಗರಪಾಲಿಕೆ ವಲಯ ಕಛೇರಿಯಲ್ಲಿ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಕಾವೇರಿ–2.0 ತಂತ್ರಾಂಶದಿಂದ ಸ್ವೀಕೃತವಾಗುವ ವಹಿವಾಟನ ದಾಖಲೆಗಳ ಆಧಾರದ ಮೇಲೆ ಹಕ್ಕು ವರ್ಗಾವಣೆಯನ್ನು ಸಾರ್ವಜನಿಕ ತಿಳುವಳಿಕೆ ಅವಧಿಯ ನಂತರ ಆಕ್ಷೇಪಣೆ ಇಲ್ಲದಿದ್ದಲ್ಲಿ ಅಥವಾ ಇದ್ದಲ್ಲಿ ನಿಯಮಾನುಸಾರ ಪರಿಶೀಲಿಸಿ, ಆಸ್ತಿ ಹಕ್ಕು ವರ್ಗಾವಣೆಗೆ ಕ್ರಮ ವಹಿಸಲಾಗುವುದು. ಅರ್ಜಿ ಅವಧಿ ಮುಗಿದ ನಂತರ ಸ್ವತ್ತಿನ ಮಾಲೀಕರು www.eaasthi.karnataka.gov.in ವೆಬ್‌ಸೈಟ್‌ನಲ್ಲಿ ಅರ್ಜಿಯ ಸ್ಥಿತಿಯನ್ನು ಪರಿಶೀಲಿಸಿಕೊಂಡು, ನಿಗಧಿತ ಶುಲ್ಕವನ್ನು ಮಹಾನಗರಪಾಲಿಕೆಗೆ ಪಾವತಿಸಿ, ಇ– ಆಸ್ತಿ ಹಕ್ಕು ಬದಲಾವಣೆ ಪತ್ರ ನಮೂನೆ–2 ಅನ್ನು ಪಡೆಯ ಬಹುದಾಗಿರುತ್ತದೆ ಎಂದು ತಿಳಿಸಿದ್ದಾರೆ.

ವಾರ್ಡನ್ ಫಯಾಜ್ ಬಾಷಾ ಅಮಾನತು

» ಚಿತ್ರದುರ್ಗ

ಸರ್ಕಾರಿ ಆಸ್ತಿ ದುರ್ಬಳಕೆ ಹಾಗೂ ವಿದ್ಯಾರ್ಥಿ ನಿಲಯ ನಿರ್ವಹಣೆಯಲ್ಲಿನ ಕರ್ತವ್ಯ ಲೋಪ ಆರೋಪದ ಮೇರೆಗೆ ಕೋನಸಾಗರ ಪರಿಶಿಷ್ಟ ಜಾತಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ ವಾರ್ಡನ್ ಫಯಾಜ್ ಬಾಷಾ ಅವರನ್ನು ಸೇವೆಯಿಂದ ಅಮಾನತುಗೊಳಿಸಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್ ಆದೇಶ ಹೊರಡಿಸಿದ್ದಾರೆ.

ಫಯಾಜ್ ಬಾಷಾ ಅವರು ಮೊಳಕಾಲ್ಮೂರು ಟೌನ್‌ನ ಪರಿಶಿಷ್ಟ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ವಾರ್ಡನ್ ಆಗಿದ್ದ ಸಂದರ್ಭದಲ್ಲಿ ವಿದ್ಯಾರ್ಥಿ ನಿಲಯಕ್ಕಾಗಿ, ಚಿತ್ರದುರ್ಗ ನಗರದ ಐ.ಯು.ಡಿ.ಪಿ ಲೇ ಔಟ್‌ನ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಹೆಚ್ಚುವರಿಯಾಗಿದ್ದ 30 ಟೂ–ಟಯರ್ ಕಾಟ್, 44 ಬೆಡ್ ಮತ್ತು 36 ಪಿಲ್ಲೋಗಳನ್ನು ತೆಗೆದುಕೊಂಡು ಹೋಗಿದ್ದರು. ವಾರ್ಡನ್ ಫಯಾಜ್ ಬಾಷಾ ಇವುಗಳಲ್ಲಿ 30 ಟೂ–ಟಯರ್ ಕಾಟ್‌ಗಳನ್ನು ದುರಪಯೋಗ ಪಡಿಸಿಕೊಂಡಿದ್ದಾರೆ. ಸರ್ಕಾರಿ ಆಸ್ತಿಗಳ ದುರ್ಬಳಕೆ, ಕರ್ತವ್ಯ ನಿರ್ಲಕ್ಷತೆ ಮತ್ತು ಬೇಜವಾಬ್ದಾರಿ ತೋರಿದ್ದಾರೆ ಎಂಬುದಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಜಂಟಿನಿರ್ದೇಶಕರು ನೀಡಿದ ವರದಿ ಆಧರಿಸಿ, ಕೆ.ಸಿ.ಎಸ್(ಸಿ.ಸಿ.ಎ) ನಿಯಮಾವಳಿ–1957ರ ನಿಯಮ 10(1)ರ ಅನ್ವಯ ವಾರ್ಡನ್ ಫಯಾಜ್ ಬಾಷಾ ಅವರನ್ನು ಇಲಾಖಾ ವಿಚಾರಣೆ/ ಶಿಸ್ತು ಕ್ರಮ ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನುತ್ತುಗೊಳಿಸಲಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

ನರಹರಿನಗರದಲ್ಲಿ ಮಿಶ್ರತಳಿ ಹಸು–ಕರು ಪ್ರದರ್ಶನ ಮತ್ತು ಬರಡು ರಾಸುಗಳ ಚಿಕಿತ್ಸಾ ಶಿಬಿರ

ಹೈನುಗಾರಿಕೆ ಮೂಲಕ ಆರ್ಥಿಕ ಸದೃಢತೆ ಪಡೆಯಲು ಶಾಸಕ ಟಿ.ರಘುಮೂರ್ತಿ ಸಲಹೆ

» ಚಳ್ಳಕೆರೆ

ರೈತ ಸಮುದಾಯ ತನ್ನ ಆರ್ಥಿಕ ಸ್ವಾಲಂಬನೆಗಾಗಿ ಕೃಷಿ ಮೇಳೆಯೇ ಅವಲಂಬಿತವಾಗಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಹೈನುಗಾರಿಕೆಯಿಂದಲೂ ಹೆಚ್ಚು ಲಾಭವನ್ನು ಪಡೆಯಲು ಆರಂಬಿಸಿದ್ದಾರೆ. ಕೃಷಿ, ತೋಟಗಾರಿಕೆ ಬೆಳೆಯ ಜೊತೆಗೆ ಹೈನುಗಾರಿಕೆಯನ್ನೂ ಒಗ್ಗೂಡಿಸಿಕೊಂಡು ಉತ್ತಮ ಲಾಭಪಡೆಯಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು,ಮಂಗಳವಾರನಗರಂಗೆರೆಗ್ರಾಮ ಪಂಚಾಯಿತಿ ವ್ಯಾಪ್ತಿಯ ನರಹರಿನಗರದಲ್ಲಿ ನರಹರಿ ಸೇವಾಪ್ರತಿಷ್ಠಾನ, ಪಶುಪಾಲನ ಮತ್ತು ಪಶುವೈದ್ಯ ಇಲಾಖೆ, ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕ ಸಂಘಗಳ ಒಕ್ಕೂಟ, ನರಹರಿನಗರ ಹಾಲುಉತ್ಪಾದಕರ ಸಹಕಾರ ಸಂಘ, ನಗರಂಗೆರೆ ಗ್ರಾಮ ಪಂಚಾಯಿತಿ ವತಿಯಿಂದ ಆಯೋಜಿಸಿದ್ದ ಒಂದುದಿನದ ಮಿಶ್ರತಳಿ ಹಸು–ಕರು ಪ್ರದರ್ಶನ ಮತ್ತು ಬರಡು ರಾಸುಗಳ ಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಹಾಲುಒಕ್ಕೂಟ ಈ ಕಾರ್ಯಕ್ರಮವನ್ನು ಆಯೋಜಿಸುವಲ್ಲಿ ಪ್ರಧಾನ ಪಾತ್ರ ವಹಿಸಿದೆ. ವಿಶೇಷವಾಗಿ ಮಿಶ್ರತಳಿಹಸು–ಕರು ಪ್ರದರ್ಶನ, ಬಡರು ರಾಸುಗಳ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೈನುಗಾರಿಕೆಗೆ ಹೆಚ್ಚು ಪ್ರೋತ್ಸಾಹವನ್ನು ನೀಡಲು ಈ ಕಾರ್ಯಕ್ರಮ ಯೋಜಿಸಿದೆ. ಸಹಕಾರಿ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಹಾಲು ಒಕ್ಕೂಟವೂ ಸಹ ಸೇರ್ಪಡೆಯಾಗಿದೆ. ನಾನು ಸಹ ಕಳೆದ ಹಲವಾರು ವರ್ಷಗಳ ಜಿಲ್ಲಾ ಡಿಸಿಸಿ ಬ್ಯಾಂಕ್ ನಿರ್ದೇಶಕನಾಗಿ ಸಹಕಾರಿ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವೆ. ಹೈನುಗಾರಿಕೆಗೆ ಹೆಚ್ಚು ಆದ್ಯತೆ ನೀಡಲು ಸಹಕಾರಿ ಕ್ಷೇತ್ರದಲ್ಲೂ ಹಲವಾರು ಯೋಜನೆಗಳಿವೆ ರೈತರು ಇದರ ಮಾಹಿತಿ ಪಡೆದು ಯೋಜನೆಗಳ ಸದುಪಯೋಗಕ್ಕೆ ಮುಂದಾಗಬೇಕಿದೆ. ಒಕ್ಕೂಟದ ಅಧಿಕಾರಿಗಳು ಹಾಗೂ ನಿರ್ದೇಶಕರು ಹೈನುಗಾರಿಕೆಯನ್ನು ಗ್ರಾಮ, ಗ್ರಾಮಗಳಿಗೂ ವಿಸ್ತರಿಸುವಂತೆ ಮನವಿ ಮಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿವಮೊಗ್ಗ ಹಾಲುಒಕ್ಕೂಟದ ಜಿಲ್ಲಾ ನಿರ್ದೇಶಕ, ಸಹಕಾರಿ ದುರೀಣ ಬಿ.ಸಿ.ಸಂಜೀವಮೂರ್ತಿ, ಚಿತ್ರದುರ್ಗ ಜಿಲ್ಲೆಯಲ್ಲಿ ಹೈನುವಾರಿಕೆಯನ್ನು ಅಭಿವೃದ್ದಿ ಪಡಿಸುವ ನಿಟ್ಟಿನಲ್ಲಿ ಎಲ್ಲಾ ತಾಲ್ಲೂಕು ಕೇಂದ್ರಗಳಿಗೆ ಭೇಟಿ ನೀಡಿ ಉಪಯುಕ್ತ ಮಾಹಿತಿ ಒದಗಿಸಲಾಗಿದೆ. ಗ್ರಾಮೀಣ ಭಾಗದಲ್ಲಿ ತಟಸ್ಥವಾಗಿದ್ದ ಹಾಲುಒಕ್ಕೂಟ ಸಹಕಾರ ಸಂಘಗಳಿಗೆ ಪುನಶ್ಚೇತನ ನೀಡುವ ನಿಟ್ಟಿನಲ್ಲಿ ಸಾಕಷ್ಟು ಪರಿಶ್ರಮವಹಿಸಲಾಗಿದೆ. ಕಳೆದ ಕೆಲವು ತಿಂಗಳ ಹಿಂದೆ ಹಾಲುಒಕ್ಕೂಟದಲ್ಲಿ ಕಾರ್ಯನಿರ್ವಹಿಸುವಾಗ ಮೃತಪಟ್ಟ ಕುಟುಂಬಗಳಿಗೆ ಪರಿಹಾರ ಒದಗಿಸಲಾಗಿದೆ. ಶಿವಮೊಗ್ಗ ಹಾಲುಒಕ್ಕೂಟ ಹೈನುಗಾರಿಕೆಯ ಸರ್ವತೋಮುಖ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತದೆ ಎಂದರು. ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿದ್ದ ನರಹರಿ ಪ್ರತಿಷ್ಠಾಪನದ ವೈ. ರಾಜರಾಂಸ್ವಾಮೀಜಿ ಮಾತನಾಡಿ, ನಮ್ಮ ಸಂಸ್ಕೃತಿಯಲ್ಲಿ ಗೋವನ್ನು ಮಾತೃಸ್ಥಾನದಲ್ಲಿಟ್ಟು ಪೂಜಿಸುತ್ತೇವೆ. ಗೋವಿನಿಂದ ಹಲವಾರು ಉಪಯೋಗವನ್ನು ಪ್ರತಿನಿತ್ಯ ಪಡೆದುಕೊಳ್ಳುತ್ತೇವೆ. ಗೋವಿನ ಪೂಜೆಯಿಂದ ನಮ್ಮೆಲ್ಲರಿಗೂ ಪುಣ್ಯ ಪ್ರಾಪ್ತಿಯಾಗುತ್ತದೆ ಎಂಬ ಪ್ರತೀತಿ ಇದೆ. ಇಂದು ಈ ಕ್ಷೇತ್ರದಲ್ಲಿ ಪಶುಸಂಗೋಪನ ಇಲಾಖೆ ಮತ್ತು ಶಿವಮೊಗ್ಗ ಹಾಲುಒಕ್ಕೂಟ ರೈತ ಸಮುದಾಯಕ್ಕೆ ಆತ್ಮವಿಶ್ವಾಸ ತುಂಬಲು ಹೈನುಗಾರಿಕೆ ಪ್ರೋತ್ಸಾಹಿಸಲು ಈ ಕಾರ್ಯಕ್ರಮ ಆಯೋಜಿಸಿದೆ. ಇದರ ಸದುಪಯೋಗ ರೈತ ಸಮುದಾಯಕ್ಕೆ ಹೆಚ್ಚು ದೊರೆಯಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರಂಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಮ್ಮವಹಿಸಿದ್ದರು.ಕಾರ್ಯಕ್ರಮದಲ್ಲಿ ಪಶುಸಂಗೋಪನೆ ಜಿಲ್ಲಾ ಉಪನಿರ್ದೇಶಕ ಕುಮಾರಸ್ವಾಮಿ, ಪಶುವೈದ್ಯಾಧಿಕಾರಿ ಡಾ.ರೇವಣ್ಣ, ಶ್ರೀನಿವಾಸ್‌ಬಾಬು, ಡಾ.ಮುಕುಂದನಾಯಕ್, ಹಾಲು ಒಕ್ಕೂಟದ ಅಧ್ಯಕ್ಷ ವಿದ್ಯಾಧರ, ನಿರ್ದೇಶಕ ಜಿ.ಪಿ.ರೇವಣಸಿದ್ದಪ್ಪ, ಜಿ.ಬಿ.ಶೇಖರಪ್ಪ, ಎನ್.ಜಿ.ಶೇಖರ್, ಕೆ.ಆರ್. ಮುರುಳೀಧರ, ಡಾ.ಎನ್.ಎಂ.ಮೂರ್ತಿ, ವಿಸ್ತಾರಣಾಧಿಕಾರಿ ನಯಾಜ್‌ಬೇಗ್, ಕೃಷ್ಣಕುಮಾರ್, ಗ್ರಾಮ ಪಂಚಾಯಿತಿ ಸದಸ್ಯರಾದ ಎನ್.ಮಂಜುನಾಥ, ಪಿಡಿಒ ಎಂ.ರಾಮಚಂದ್ರಪ್ಪ, ಮುಖಂಡ ಶಶಿಧರ, ಶೈಲಜಾಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲಾ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಸುರೇಶ್ ಮನವಿ

ಗೊಲ್ಲರಹಟ್ಟಿಯಲ್ಲಿ ಜ್ವರ ಪ್ರಕರಣ: ಕೀಟಗಳು ಉತ್ಪತ್ತಿಯಾಗದಂತೆ ನೈರ್ಮಲ್ಯ ಕಾಪಾಡಿ

» ಚಿತ್ರದುರ್ಗ

ಕೀಟಗಳು ಉತ್ಪತ್ತಿಯಾಗದಂತೆ ನೈರ್ಮಲ್ಯ ಕಾಪಾಡಿ ಎಂದು ಜಿಲ್ಲಾ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಸುರೇಶ್ ಮನವಿ ಮಾಡಿದರು.

ಚಿತ್ರದುರ್ಗ ತಾಲ್ಲೂಕಿನ ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಕಲ್ಲಹಳ್ಳಿ ಗೊಲ್ಲರಹಟ್ಟಿ ಗ್ರಾಮದಲ್ಲಿ ಜ್ವರ ಪ್ರಕರಣಗಳು ಕಂಡು ಬಂದ ಹಿನ್ನೆಲೆಯಲ್ಲಿ ಜ್ವರ ಚಿಕಿತ್ಸಾ ಕೇಂದ್ರ ತೆರೆದು, ಗುಂಪು ಸಭೆಗಳ ಮೂಲಕ ಮಾಹಿತಿ ಶಿಕ್ಷಣ ಸಂವಹನ ಪ್ರಕ್ರಿಯೆ ಚಟುವಟಿಕೆಯಲ್ಲಿ ಅವರು ಮಾತನಾಡಿದರು.

ಕೀಟಜನ್ಯ ರೋಗಗಳು ಸರಿಯಾಗಿ ನಿಯಂತ್ರಿಸದ್ದಿದ್ದಲ್ಲಿ ಮಾರಣಾಂತಿಕವಾಗುತ್ತದೆ. ಪರಿಸರ ಸ್ವಚ್ಛತೆ ನೈರ್ಮಲ್ಯ ಕಾಪಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಡೆಂಗಿ, ಚಿಕನ್ ಗುನ್ಯಾ ಮಲೇರಿಯಾ ಸೊಳ್ಳೆಗಳಿಂದ ಹರಡುತ್ತದೆ. ಹಾಗಾಗಿ ಮುನ್ನೆಚ್ಚರಿಕೆ ಕ್ರಮವಾಗಿ ಕೀಟಗಳು ಉತ್ಪತ್ತಿಯಾಗದಂತೆ ನೈರ್ಮಲ್ಯ ಕಾಪಾಡಿ ಎಂದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಯಾವುದೇ ಜ್ವರವಿರಲಿ ರಕ್ತಪರೀಕ್ಷೆ ಮಾಡಿ. ದೇವರನ್ನು ಕೇಳಿ ಚಿಕಿತ್ಸೆ ಪಡೆಯುತ್ತೇನೆ ಎಂಬ ಮೂಢನಂಬಿಕೆಯಿಂದ ದೂರ ಬನ್ನಿ. ಈ ಗ್ರಾಮದಲ್ಲಿರುವ 84 ಮನೆಗಳಲ್ಲಿ 10 ಮನೆಗಳಿಗಿಂತ ಹೆಚ್ಚಿನ ಮನೆಗಳಲ್ಲಿ ಲಾರ್ವ ಕಂಡು ಬಂದಿದೆ. ನಿಮ್ಮ ಮನೆಯ ನೀರಿನ ಸಂಗ್ರಹ

ಪರಿಕರಗಳಾದ ತೊಟ್ಟಿ, ಬಕೆಟ್, ಡ್ರಮ್, ಬ್ಯಾರೆಲ್ ಇತ್ಯಾದಿಗಳನ್ನು ಸ್ವಚ್ಛವಾಗಿ ತೊಳೆದು ಒಣಗಿಸಿ ನಂತರ ನೀರನ್ನು ಸಂಗ್ರಹಿಸಿ ಮುಚ್ಚಳವನ್ನು ಮುಚ್ಚಿ ವಾರಕ್ಕೊಮ್ಮೆಯಾದರೂ ಡ್ರೈ ಡೇ ಆಚರಿಸಿ. ಮುಂಜಾನೆ, ಮುಸ್ಸಂಜೆಯಲ್ಲಿ ಹೊಂಗೆ ಮತ್ತು ಬೇವಿನ ಸೊಪ್ಪಿನ ಹೊಗೆ ಹಾಕುವುದರಿಂದ ಸೊಳ್ಳೆಗಳ ನಿಯಂತ್ರಣವಾಗುತ್ತದೆ ಎದರು.

ಸೊಳ್ಳೆ ಪರದೆ ಬಳಕೆ ಮಾಡಿ. ಡೆಂಗಿ ಜ್ವರ ಬಂದ ಮೇಲೆ ಚಿಕಿತ್ಸೆ ಪಡೆಯುವುದಕ್ಕಿಂತ ಡೆಂಗ್ಯೂ ಜ್ವರ ಬಾರದ ಹಾಗೆ ಸೊಳ್ಳೆ ನಿಯಂತ್ರಿಸುವುದು ಸರಿಯಾದ ಕೆಲಸ. ಗಾಬರಿಯಾಗುವುದು ಬೇಡ. ಸೊಳ್ಳೆ ಕಡಿತದಿದ ಸೂಕ್ತ ರಕ್ಷಣೆ ಪಡೆಯಿರಿ ಎಂದರು. ಗ್ರಾಮದ ಶಾಲೆಯ ಆವರಣದಲ್ಲಿ ಜ್ವರ ಚಿಕಿತ್ಸಾ ಕೇಂದ್ರ ಸ್ಥಾಪಿಸಿ, ಸಮುದಾಯ ಆರೋಗ್ಯ ಅಧಿಕಾರಿಗಳಾದ ರಶ್ಮಿ, ಶಾಂತಲಾ, ಜ್ವರ ತಪಾಸಣೆ, ರಕ್ತ ಲೇಪನ ಸಂಗ್ರಹಣೆ ಪರೀಕ್ಷೆ, ಚಿಕಿತ್ಸೆ ನೀಡಿದರು.

ಇದೇ ಸಂದರ್ಭದಲ್ಲಿ ಮನೆ ಮನೆ ಭೇಟಿ ನೀಡಿ, ಮಾಹಿತಿ ಶಿಕ್ಷಣ ನೀಡಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಿಕಾರ್ಜುನ್, ಗ್ರಾಮ ಪಂಚಾಯಿತಿ ಸದಸ್ಯರಾದ ನಿಜಲಿಂಗಪ್ಪ, ಶಾಲಾ ಶಿಕ್ಷಕರಾದ ಶಾಂತಲಾ, ಪರಿಮಳ, ಆರೋಗ್ಯ ನಿರೀಕ್ಷಣಾಧಿಕಾರಿ ಜ್ಯೋತಿ, ಆಶಾ ಕಾರ್ಯಕರ್ತೆ ಪಾರ್ವತಮ್ಮ, ಶೋಭಾ ಹಾಗೂ ಗ್ರಾಮಸ್ಥರು ಇದ್ದರು.

ಜ.4, 5 ರಂದು ಯುವಜನೋತ್ಸವ, ಸಚಿವರಿಂದ ಲೋಗೋ ಉದ್ಘಾಟನೆ

» ದಾವಣಗೆರೆ

ದಾವಣಗೆರೆಯಲ್ಲಿ ಜನವರಿ 4 ಮತ್ತು 5 ರಂದು ನಡೆಯಲಿರುವ ರಾಜ್ಯ ಮಟ್ಟದ ಯುವಜನೋತ್ಸವದ ಲೋಗೋವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನರವರು ಹಾಗೂ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ರವರು ಬೆಂಗಳೂರಿನ ಗೃಹ ಕಚೇರಿಯಲ್ಲಿ ಡಿಸೆಂಬರ್ 23 ರಂದು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಪಾಲಿಕೆ ಮೇಯರ್ ಚಮನ್ ಸಾಬ್ ಕೆ, ದೂಡ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿ, ದೂಡ ಆಯುಕ್ತರಾದ ತಿಮ್ಮಣ್ಣ ಹುಲ್ಲುಮನೆ, ಯುವಜನ ಸೇವೆ ಇಲಾಖೆ ಸಹಾಯಕ ನಿರ್ದೇಶಕಿ ರೇಣುಕಾದೇವಿ, ಸಮರ್ಥ ಶಾಮನೂರು, ಪಾಲಿಕೆ ಸದಸ್ಯರಾದ ಸಾಗರ್ ಎಲ್.ಹೆಚ್. ರವರು ರಾಷ್ಟ್ರೀಯ ಯುವ ಪ್ರಶಸ್ತಿ ವಿಜೇತರಾದ ಮಂಜುನಾಥ್ ಮಾಗನಹಳ್ಳಿ ಶಂಭು ಉರೇಕೊಂಡಿ, ಶಿವರತ್ನನ್, ರಂಗಸ್ವಾಮಿ, ತಾಹಿರ್, ಮುಜಾಹಿದ್ ಪಾಷ, ನವೀನ್ ಕಕ್ಕರಗೊಳ್ಳ, ತಿಪ್ಪೇಶ್ ಮತ್ತಿತರರು ಹಾಜರಿದ್ದರು.

ತಾಂತ್ರಿಕ ವ್ಯವಸ್ಥಾಪಕರ ನೇಮಕಾತಿಗೆ ಅರ್ಜಿ ಆಹ್ವಾನ

ದಾವಣಗೆರೆ : ಆತ್ಮ ಯೋಜನೆಯಡಿ ನೇರ ಗುತ್ತಿಗೆ ಆಧಾರದ ಮೇಲೆ ಚನ್ನಗಿರಿ ತಾಲ್ಲೂಕಿನ ತಾಂತ್ರಿಕ ವ್ಯವಸ್ಥಾಪಕರನ್ನು ನೇಮಕಾತಿ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಫಾಸ್ಟ್ ನ್ಯೂಸ್

ಅರ್ಜಿ ಆಹ್ವಾನ ಅಪೂರ್ಣ ಅರ್ಜಿ ಪೂರ್ಣಗೊಳಿಸಲು ಜ.5ರವರಗೆ ಕಾಲಾವಕಾಶ

» ಚಿತ್ರದುರ್ಗ

ಜಿಲ್ಲೆಯ ಚಿತ್ರದುರ್ಗ, ಭರಮಸಾಗರ, ಚಳ್ಳಕೆರೆ, ಹಿರಿಯೂರು, ಹೊಳಲ್ಕೆರೆ, ಹೊಸದುರ್ಗ ಮತ್ತು ಮೊಳಕಾಲ್ಮೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 64 ಅಂಗನವಾಡಿ ಕಾರ್ಯಕರ್ತೆ, 3 ಮಿನಿ ಅಂಗನವಾಡಿ ಕಾರ್ಯಕರ್ತೆ ಹಾಗೂ 149 ಅಂಗನವಾಡಿ ಸಹಾಯಕಿಯರನ್ನು ಗೌರವ ಸೇವೆಯ ಮೇಲೆ ಭರ್ತಿ ಮಾಡಲು ಈ ಹಿಂದೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ಈ ಬಗ್ಗೆ ಕಳೆದ ಜುಲೈ 29 ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಆಗಸ್ಟ್ 31 ರವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು. ಆನ್‌ಲೈನ್‌ನಲ್ಲಿ ಒಟ್ಟು 4 ಹಂತಗಳಲ್ಲಿ ಅರ್ಜಿ ಭರ್ತಿ ಮಾಡಬೇಕಾಗಿದ್ದು, ಮೊದಲ ಹಂತದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು. ಎರಡನೇ ಹಂತದಲ್ಲಿ ಭಾವಚಿತ್ರ ಹಾಗೂ ಸಹಿ ಮಾದರಿ ಅಪ್‌ಲೋಡ್ ಮಾಡುವುದು. ಮೂರನೇ ಹಂತದಲ್ಲಿ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು. ನಾಲ್ಕನೇ ಹಂತದಲ್ಲಿ ಆಧಾರ್ ಸಂಖ್ಯೆ ನಮೂದಿಸಿ ಇ–ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಪೂರ್ಣಗೊಳಿಸಬೇಕಾಗಿತ್ತು. ಆದರೆ ಕೆಲವರಿಗೆ ಮೊದಲನೇ ಹಂತದಲ್ಲಿಯೇ ಯಶಸ್ವಿಯಾಗಿ ಅರ್ಜಿ ಸ್ವೀಕೃತವಾಗಿದೆ ಎಂದು ಇಂಗ್ಲೀಷ್‌ನಲ್ಲಿ ಅಭ್ಯರ್ಥಿಗಳ ಮೊಬೈಲ್ ಸಂಖ್ಯೆಗೆ ಸಂದೇಶ ರವಾನೆಯಾಗದೆ. ಈ ಹಿನ್ನಲೆಯಲ್ಲಿ 1009 ಅರ್ಜಿಗಳಲ್ಲಿ 499 ಅರ್ಜಿಗಳು ಅಪೂರ್ಣವಾಗಿ ಸ್ವೀಕೃತವಾಗಿವೆ. 4 ಹಂತಗಳನ್ನು ಪೂರ್ಣಗೊಳಿಸದ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ ಡಿ.26 ರಿಂದ ಜನವರಿ 05 ಸಂಜೆ 5:30 ರವರೆಗೆ ಅಪೂರ್ಣ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಿ ಸರ್ಕಾರ ಆದೇಶ ಹೊರಡಿಸಿದೆ. ಈ ಹಿನ್ನಲೆಯಲ್ಲಿ ಅರ್ಜಿ ಸಲ್ಲಿಕೆ ಪೂರ್ಣಗೊಳಿಸದ ಜಿಲ್ಲೆಯ 499 ಅಭ್ಯರ್ಥಿಗಳ ವಿವರಗಳನ್ನು ಆಯಾ ಅಂಗನವಾಡಿ ಕೇಂದ್ರ, ಗ್ರಾಮ ಪಂಚಾಯಿತಿ, ಶಾಲೆಗಳು ಹಾಗೂ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳ ಕಚೇರಿಯಲ್ಲಿ ಪ್ರಕಟಿಸಲಾಗಿದೆ. ಜುಲೈ 29ಕ್ಕೆ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ಸಂಬಂಧಿಸಿದ ದಾಖಲಾತಿಗಳನ್ನು ಮಾತ್ರ ಅರ್ಜಿ ಪರಿಶೀಲನೆಯಲ್ಲಿ ಪರಿಗಣಿಸಲಾಗುವುದು. ಷರತ್ತು ಹಾಗೂ ಮಾನದಂಡಗಳು ಇದೇ ಅಧಿಸೂಚನೆಗೆ ಒಳಪಟ್ಟಿರುತ್ತವೆ. ಸಂಬಂಧಿಸಿದ ಅಭ್ಯರ್ಥಿಗಳು https://karnemakaone.kar.nic.in/abcd ಅರ್ಜಿ ಸಲ್ಲಿಕೆಯನ್ನು ಪೂರ್ಣಗೊಳಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

26ಕ್ಕೆ ಕಂಪ್ಯೂಟರ್ ಆಪರೇಟರ್ ದಿನಾಚರಣೆ

» ಚಿತ್ರದುರ್ಗ

ತಾಲೂಕು ಪಂಚಾಯಿತಿಯಲ್ಲಿ ಡಿ. 26 ರಂದು ತಾಲೂಕ್ ಪಂಚಾಯಿತಿ ಸಭಾಂಗಣದಲ್ಲಿ ಸರ್ಕಾರಿ ಆದೇಶದ ಪ್ರಕಾರ ಕಂಪ್ಯೂಟರ್ ಆಪರೇಟರ್ ದಿನಾಚರಣೆಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಕ್ಷೇಮಾಭಿವೃದ್ಧಿ ಸಂಘ ರಿ ಮತ್ತು ಜಿಲ್ಲಾ ಮತ್ತು ತಾಲೂಕು ಎಲ್ಲ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್‌ಗಳ ಜಿಲ್ಲಾಧ್ಯಕ್ಷ ಜಗದೀಶ್ ಜಿ.ಸಿ. ತಿಳಿಸಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿತ್ರದುರ್ಗ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರವಿಕುಮಾರ್ ವಹಿಸಲಿದ್ದಾರೆ. ತಾಲೂಕು ಪಂಚಾಯಿತಿ ಎಡಿಪಿಆರ್ ಶ್ರೀಮತಿ ರೂಪಕುಮಾರಿ ಆರಎಂ ಜಿ ಎನ್ ಆರ್ ಇ ಜಿ ಎ ಸಹಾಯಕ ನಿರ್ದೇಶಕರು ಎರ್ರಿಸ್ವಾಮಿ ತಾಲೂಕು ಪಂಚಾಯಿತಿ ಮ್ಯಾನೇಜರ್ ಶಾಹಿದ್ ಇರ್ಫಾನ್ ಕೆಎಂ ತಾಲೂಕು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಅಧ್ಯಕ್ಷರು ಸಂತೋಷ್ ಕುಮಾರ್ ತಾಲೂಕು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸೆಕ್ರೆಟರಿ ಎಸ್ ಡಿ ಎ ವೃಂದದ ನೌಕರ ಸಂಘದ ನಿರ್ದೇಶಕರು ಮಾರುತಿ ಮತ್ತು ನಿಜಗುಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ತಾಲೂಕಿನ ಎಲ್ಲಾ ಕಂಪ್ಯೂಟರ್ ಆಪರೇಟರ್ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿ ಮಾಡಿಕೊಡಲು ಕೋರಿದ್ದಾರೆ.

ಶರಣ ಸಾಹಿತ್ಯ ಸಮ್ಮೇಳನ

» ಚಿತ್ರದುರ್ಗ

ದಿನಾಂಕ 18 ಮತ್ತು 19, ಜನವರಿ, 2025ರಂದು ಚಿತ್ರದುರ್ಗದಲ್ಲಿ ಅಖಿಲ ಭಾರತ 13ನೆಯ ಶರಣ ಸಾಹಿತ್ಯ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಕೆ.ಎಂ.ವಿರೇಶ್ ತಿಳಿಸಿದ್ದಾರೆ.ಅಖಿಲ ಭಾರತ 13ನೆಯ ಶರಣ ಸಾಹಿತ್ಯ ಸಮ್ಮೇಳನವು ಚಿತ್ರದುರ್ಗದ ಮುರುಘಾಮಠದ ಅನುಭವ ಮಂಟಪದಲ್ಲಿ ನಡೆಯಲಿದೆ, ಸಮ್ಮೇಳನದ ಅಂಗವಾಗಿ ಡಿ. 27 ರ ಶುಕ್ರವಾರ ಸಂಜೆ 5 ಗಂಟೆಗೆ ಸಮ್ಮೇಳನ ಕಾರ್ಯಕ್ರಮದ ರೂಪುರೇಷೆಗಳ ಸಿದ್ಧತೆಗಾಗಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ, ಈ ಸಭೆಗೆ ಆಗಮಿಸಿ ಸೂಕ್ತ ಸಲಹೆ ಸೂಚನೆಗಳನ್ನು ನೀಡಬೇಕಾಗಿ ಮನವಿ ಮಾಡಿದ್ದಾರೆ.

ವಧು ವರರ ಸಮಾವೇಶ

» ಚಿತ್ರದುರ್ಗ

ನಗರದ ಬಸವೇಶ್ವರ ವಧು–ವರರ ಮಾಹಿತಿ ಕೇಂದ್ರದ ವತಿಯಿಂದಸರ್ವಧರ್ಮೀಯರ ವಧು–ವರರ ರಾಜ್ಯ ಮಟ್ಟದ ಸಮಾವೇಶವನ್ನು ದಿನಾಂಕ 29.12.2024 ರ ಭಾನುವಾರ ಬೆಳಗ್ಗೆ 11 ಗಂಟೆಗೆ ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಆಯೋಜಿಸಲಾಗಿದೆ.

ವ್ಯವಸ್ಥಿತವಾಗಿ ಪರೀಕ್ಷಾ ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

ಡಿ.29ಕ್ಕೆ ಪ್ರೊಬೆಷನರ್ಸ್ ಮರು ಸ್ಪರ್ಧಾತ್ಮಕ ಪರೀಕ್ಷೆ

» ಚಿತ್ರದುರ್ಗ

ಇದೇ ಡಿ.29 ರಂದು ಕರ್ನಾಟಕ ಲೋಕಸೇವಾ ಆಯೋಗದಿಂದ ಗೆಜೆಟೆಡ್ ಪ್ರೊಬೆಷನರ್ಸ್ 384 ಹುದ್ದೆಗಳ ನೇಮಕಾತಿಗಾಗಿ ಪೂರ್ವಭಾವಿ ಮರು ಪರೀಕ್ಷೆ ನಡೆಯಲಿದೆ. ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ವ್ಯವಸ್ಥಿವಾಗಿ ಪರೀಕ್ಷಾ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಈ ಕುರಿತು ನಗರದ ಜಿ.ಪಂ. ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ಪರ್ಧಾತ್ಮಕ ಪರೀಕ್ಷೆ ನಿರ್ವಹಣೆ ಕಾರ್ಯ ಅತಿ ಸೂಕ್ಷ್ಮವಾದದ್ದು, ಅಭ್ಯರ್ಥಿಗಳ ಭವಿಷ್ಯ ಇದರಲ್ಲಿ ಅಡಗಿದೆ. ಅಕ್ರಮಗಳಿಗೆ ಅವಕಾಶ ಮಾಡಿಕೊಡದಂತೆ ಎಚ್ಚರಿಕೆಯಿಂದ, ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಪ್ರಾಮಾಣಿಕ ಅಭ್ಯರ್ಥಿಗಳಿಗೆ ಅನ್ಯಾಯವಾಗಬಾರದು. ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ಹಾಗೂ ಒಎಂಆರ್ ಬಂಡಲ್‌ಗಳನ್ನು ಕೊಂಡೊಯ್ಯಲು ನೇಮಿಸಿರುವ ಮಾರ್ಗಾಧಿಕಾರಿಗಳು ಸರಿಯಾದ ಸಮಯಕ್ಕೆ ಖಜಾನೆಯಿಂದ ಪ್ರಶ್ನೆ ಪತ್ರಿಕೆಗಳನ್ನು ಪಡೆದು, ಪರೀಕ್ಷಾ ಕೇಂದ್ರಗಳಿಗೆ ತಲುಪಿಸಬೇಕು. ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಒಎಂಆರ್ ಬಂಡಲ್‌ಗಳನ್ನು ಅಂಚೆ ಮೂಲಕ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಕಳುಹಿಸಿಕೊಡಬೇಕು. ಈ ಹಿನ್ನಲೆಯಲ್ಲಿ ಪರೀಕ್ಷಾ ಕೇಂದ್ರಗಳ ಬಳಿ ಇರುವ ಅಂಚೆ ಕಚೇರಿಗಳು ಒಎಂಆರ್ ಬಂಡಲ್‌ಗಳು ತಲುಪುವವರೆಗೂ ತಪ್ಪದೇ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ಜಾಮರ್ ಅಳವಡಿಕೆ: ಮೊಬೈಲ್ ಬ್ಲೂಟೂತ್ ಮತ್ತು ಇತರೆ ಆಧುನಿಕ ಸಂವಹನ ಉಪಕರಣಗಳನ್ನು ಬಳಸಿ ಪರೀಕ್ಷೆಯಲ್ಲಿ ಅಕ್ರಮಗಳನ್ನು ಎಸಗುವುದನ್ನು ತಡೆಯಲು ಪರೀಕ್ಷಾ ಕೇಂದ್ರಗಳಲ್ಲಿ ಜಾಮರ್ ಅಳವಡಿಕೆ ಮಾಡಲಾಗುವುದು. ಪ್ರತಿ ಕೊಠಡಿಯಲ್ಲಿ ಸಿಸಿ ಟಿವಿ ಕ್ಯಾಮೆರಾ ಅಳವಡಿಸಲಾಗುವುದು. ಇದರೊಂದಿಗೆ ಫೇಸ್ ರೆಕಗ್ನೈಸೇಷನ್ ಹಾಗೂ ಬಯೋಮೆಟ್ರಿಕ್ ಹಾಜರಾತಿಯನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕವಾದ ಸಿಬ್ಬಂದಿ ಕೈಗೊಳ್ಳುವರು. ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವ ಅಭ್ಯರ್ಥಿಗಳನ್ನು ಪೂರ್ಣ ಪ್ರಮಾಣದಲ್ಲಿ ತಪಾಸಣೆಗೆ ಒಳಪಡಿಸಬೇಕು. ಇದಕ್ಕಾಗಿ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಫ್ರಿಸ್ಕಿಂಗ್ ತಂಡಗಳನ್ನು ರಚಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಮರು ಪರೀಕ್ಷೆ ಪ್ರವೇಶ ಪತ್ರ : 384 ಗೆಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳ ನೇಮಕಾತಿಗೆ ಕಳೆದ ಆ.27 ರಂದು ಪೂರ್ವಭಾವಿ ಪರೀಕ್ಷೆ ನಡೆಸಲಾಗಿತ್ತು. ಆದರೆ ತಾಂತ್ರಿಕ ಕಾರಣಗಳಿಂದ ಡಿ.29 ರಂದು ಮತ್ತೊಮ್ಮೆ ಮರು ಪೂರ್ವಭಾವಿ ಪರೀಕ್ಷೆ ನಡೆಸಲಾಗುತ್ತಿದೆ. ಅಭ್ಯರ್ಥಿಗಳು ಕೆ.ಪಿ.ಎಸ್.ಸಿ ವೆಬ್ ಸೈಟ್ ಮೂಲಕ ಹೊಸದಾಗಿ ಮರು ಪರೀಕ್ಷೆ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು. ಹೊಸ ಪ್ರವೇಶ ಪತ್ರದಲ್ಲಿ ನಮೂದಿಸಲಾಗಿರುವ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗೆ ಹಾಜರಾಗಬೇಕು. ತಪ್ಪದೇ ಕೆ.ಪಿ.ಎಸ್.ಸಿ ಸೂಚಿಸಿರುವ ಎಲ್ಲಾ ನಿಯಮಗಳನ್ನು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಭ್ಯರ್ಥಿಗಳಿಗೆ ಸೂಚನೆ ನೀಡಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ: ಪರೀಕ್ಷಾ ಪಾವಿತ್ರ್ಯತೆ ಕಾಪಾಡುವ ದೃಷ್ಟಿಯಿಂದ ಡಿ.29 ರಂದು ಪರೀಕ್ಷೆ ನಡೆಯುವ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ವ್ಯಾಪ್ತಿ ಪ್ರದೇಶದಲ್ಲಿ ಸೆಕ್ಷನ್ 114 ವಿಧಿಸಿ ನಿಷೇಧಾಜ್ಞೆ ಜಾರಿ ಮಾಡಿ, ಆದೇಶ ಹೊರಡಿಸಲಾಗಿದೆ. ಪರೀಕ್ಷಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಜೆರಾಕ್ಸ್, ಕಂಪ್ಯೂಟರ್ ಹಾಗೂ ಇಂಟರ್‌ನೆಟ್ ಸೆಂಟರ್‌ಗಳನ್ನು ತೆರೆಯುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳಿಗೆ ಪಶ್ನೆ ಪತ್ರಿಕೆ ಹಾಗೂ ಒಎಂಆರ್ ಗಳನ್ನು ಕೊಂಡೊಯ್ಯಲು ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಆರೋಗ್ಯ ಇಲಾಖೆಯಿಂದ ಹೆಲ್ತ್ ಸ್ಕ್ರೀನಿಂಗ್ ಕೌಂಟರ್ ಸ್ಥಾಪಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ಮಾಹಿತಿ ನೀಡಿದರು.

25 ಪರೀಕ್ಷಾ ಕೇಂದ್ರ, 8170 ಅಭ್ಯರ್ಥಿಗಳು: ಪರೀಕ್ಷೆಯು ಡಿ.29 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 12 ರವರೆಗೆ ಪತ್ರಿಕೆ–01 ಹಾಗೂ ಮಧ್ಯಾಹ್ನ 02 ರಿಂದ ಸಂಜೆ 04 ರವರೆಗೆ ಪತ್ರಿಕೆ–02 ರ ಪರೀಕ್ಷೆ ನಡೆಯಲಿದೆ. ನಗರದಲ್ಲಿ 25 ಪರೀಕ್ಷಾ ಕೇಂದ್ರಗಳು ಇದ್ದು, ಒಟ್ಟು 8,170 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇದರಲ್ಲಿ 155 ವಿಕಲಚೇತನ ಅಭ್ಯರ್ಥಿಗಳು ಇದ್ದಾರೆ. 4 ಅಂಧ ವಿದ್ಯಾರ್ಥಿಗಳಿಗೆ ಸ್ಕ್ರೈಬ್ ಸೌಲಭ್ಯ ಒದಗಿಸಲು ಕೆ.ಪಿ.ಎಸ್.ಸಿ ಇಂದ ನಿರ್ದೇಶನ ಬಂದಿದೆ. ವಿಕಲಚೇತನ ಅಭ್ಯರ್ಥಿಗಳ ಸಹಾಯಕ್ಕಾಗಿ ಪರೀಕ್ಷಾ ಕೇಂದ್ರದಲ್ಲಿ ವ್ಹೀಲ್ ಚೇರ್ ಜೊತೆಗೆ ರ್‍ಯಾಂಪ್ ಅಳವಡಿಸಲಾಗಿದೆ. ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗದಿಂದ ಪರೀಕ್ಷಾ ಮಾಹಿತಿ ಕೈಪಿಡಿ ಬಂದಿದೆ. ಇದರ ಅನುಸಾರ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕರಿಗೆ ತರಬೇತಿ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಸಭೆಯಲ್ಲಿ ಮಾಹಿತಿ ನೀಡಿದರು.

ಜಿ.ಪಂ. ಸಿಇಓ ಎಸ್. ಜೆ.ಸೋಮಶೇಖರ್, ಜಿಲ್ಲಾ ಖಜಾನಾಧಿಕಾರಿ ರಮೇಶ್ ಅರೆ ಮಲ್ಲಾಪುರ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಮಕ್ಕಳ ರಕ್ಷಣಾ ನೀತಿ ಪರಿಣಾಮಕಾರಿಯಾಗಿ ಜಾರಿಯಾಗಲಿ

» ಚಿತ್ರದುರ್ಗ

ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಮಕ್ಕಳ ರಕ್ಷಣಾ ನೀತಿ–2016 ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣ ಸಭಾಂಗಣದಲ್ಲಿ ಸೋಮವಾರ ರಾಜ್ಯ ಮಕ್ಕಳ ಹಕ್ಕುಗಳ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ, ಕಾರ್ಮಿಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾದ 'ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ರಕ್ಷಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ರಕ್ಷಣಾ ನೀತಿಯಲ್ಲಿ ಮಕ್ಕಳಿಗೆ ಒದಗಿಸಬೇಕಾದ ಮೂಲ ಸೌಕರ್ಯಗಳು, ಭದ್ರತೆ, ಮಕ್ಕಳ ರಕ್ಷಣೆಗೆ ಕೈಗೊಳ್ಳಬೇಕಾದ ಕ್ರಮಗಳು, ಮುಂತಾದ ವಿಷಯಗಳ ಕುರಿತು ವಿಶೇಷ ಹಾಗೂ ವಿವರವಾದ ನಿಯಮಗಳಿವೆ. ಇವುಗಳನ್ನು ಶಾಲೆಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬೇಕು. ಶಾಲೆಗಳು ಕೇವಲ ಶಿಕ್ಷಣ ಕೊಡುವ ಕೇಂದ್ರಗಳಾಗದೆ, ರಕ್ಷಣೆಯನ್ನೂ ಒದಗಿಸಬೇಕಾದ ತುರ್ತು ಅಗತ್ಯವಿದೆ. ಶಾಲೆಗಳು ಮಕ್ಕಳ ಹಕ್ಕುಗಳ ಉಲ್ಲಂಘನೆ ಆಗದಂತೆ ನೋಡಿಕೊಳ್ಳಬೇಕು. ಮಕ್ಕಳ ರಕ್ಷಣಾ ನೀತಿ ಕಟ್ಟುನಿಟ್ಟಾಗಿ ಶಾಲೆಗಳಲ್ಲಿ ಅನುಷ್ಠಾನವಾಗಬೇಕು ಎಂದು ಡಾ.ಕೆ.ಟಿ.ತಿಪ್ಪೇಸ್ವಾಮಿ ಹೇಳಿದರು.

ಇದೇ ಸಂದಭದಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ–2009ರ ಅನ್ವಯ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಸೇರಿಸುವ ಆಂದೋಲನಾ ಕುರಿತು ತರಬೇತಿ ನೀಡಲಾಯಿತು.

ಚಿತ್ರದುರ್ಗ ಉಪವಿಭಾಗದ ಡಿವೈಎಸ್‌ಪಿ ಪಿ.ಕೆ.ದಿನಕರ್ ಅವರು ಶಾಲೆಯಲ್ಲಿನ ಮಕ್ಕಳ ಸುರಕ್ಷತೆ ಹಾಗೂ ತೆರೆದ ಮನೆ ಕಾರ್ಯಕ್ರಮದ ಬಗ್ಗೆ ಹಾಗೂ ಶಿಕ್ಷಕ ಸಿ.ಎಲ್.ಏಕನಾಥ್ ಅವರು ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ–2009ರ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಪಿ.ಶೀಲಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಓ.ಪವಿತ್ರ, ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಶ್ ಸೇರಿದಂತೆ, ಶಿಕ್ಷಣ ಇಲಾಖೆ ಅಧಿಕಾರಿಗಳು, ಅಕ್ಷರ ದಾಸೋಹ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದರು.

ಮಕ್ಕಳ ರಕ್ಷಣಾ ನೀತಿ ಕುರಿತು ತರಬೇತಿ ಕಾರ್ಯಗಾರ

» ಚಿತ್ರದುರ್ಗ

ರಾಜ್ಯ ಮಕ್ಕಳ ಹಕ್ಕುಗಳ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್, ಪದವಿ ಪೂರ್ವ ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಹಾಗೂ ಚಿತ್ರಾ ಡಾನ್‌ಬೋಸ್ಕೋ ಶಾಲೆ ಸಹಯ

ಫಾಸ್ಟ್ ನ್ಯೂಸ್

ಜಿಲ್ಲಾ ಹಾಪ್‌ಕಾಮ್ಸ್: ಹಣ್ಣು ಮಾರಾಟಕ್ಕೆ ಮಳಿಗೆ ಲಭ್ಯ

» ಚಿತ್ರದುರ್ಗ

ಜಿಲ್ಲಾ ತೋಟದ ಉತ್ಪನ್ನಗಳ ಬೆಳೆಗಾರರ ಸಹಕಾರ ಮಾರಾಟ ಮತ್ತು ಸಂಸ್ಕರಣ ಸಂಘ (ಜಿಲ್ಲಾ ಹಾಪ್‌ಕಾಮ್ಸ್) ಸರ್ಕಾರದ ಅಂಗ ಸಂಸ್ಥೆಯಾಗಿದ್ದು, ನೇರವಾಗಿ ರೈತರಿಂದ ಖರೀದಿಸಿದ ತಾಜಾ ಹಣ್ಣು ಮತ್ತು ತರಕಾರಿಗಳನ್ನು ಸೂಕ್ತ ದರದಲ್ಲಿ ಗ್ರಾಹಕರಿಗೆ ಮಾರಾಟ ಮಾಡುವ ವ್ಯವಸ್ಥೆಯನ್ನು ಸಂಘವು ನಿರ್ವಹಿಸುತ್ತಿದೆ. ನಗರದ ಬ್ಯಾಂಕ್ ಕಾಲೋನಿ, ವಿದ್ಯಾನಗರ ಬಡಾವಣೆ, ತರಳಬಾಳು ನಗರ ಮತ್ತು ಸರಸ್ವತಿಪುರಂ ಬಡಾವಣೆ ಸೇರಿದಂತೆ ಒಟ್ಟು ನಾಲ್ಕು ಮಳಿಗೆಗಳು ಲಭ್ಯವಿವೆ. ಸಂಘದ ನಿಬಂಧನೆಗೆ ಒಳಪಟ್ಟು, ಈ ಮಾರಾಟ ಮಳಿಗೆಗಳಲ್ಲಿ ಹಣ್ಣು ತರಕಾರಿಗಳನ್ನು ಮಾರಾಟ ಮಾಡಲು ಆಸಕ್ತಿಯುಳ್ಳವರು ನಗರದ ತುರುವನೂರು ರಸ್ತೆ, ಎಸ್.ಪಿ.ಆಫೀಸ್ ಹತ್ತಿರದ ಜಿಲ್ಲಾ ಹಾಪ್‌ಕಾಮ್ಸ್ ಕಚೇರಿಗೆ ಅಥವಾ ಜಿಲ್ಲಾ ಹಾಪ್‌ಕಾಮ್ಸ್ ಅಧ್ಯಕ್ಷರ ದೂರವಾಣಿ ಸಂಖ್ಯೆ 8197824949, ವ್ಯವಸ್ಥಾಪಕ ನಿರ್ದೇಶಕರು– 9900054307, ಕಾರ್ಯದರ್ಶಿ 7892174640 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಹಾಪ್ ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ವಿದ್ಯಾರ್ಥಿ ವೇತನಕ್ಕೆ ಇ- ಕೆವೈಸಿ ಕಡ್ಡಾಯ

» ಚಿತ್ರದುರ್ಗ

2024–25ನೇ ಸಾಲಿಗೆ ಮೆಟ್ರಿಕ್ ಪೂರ್ವ ಹಾಗೂ ನಂತರದ ವಿದ್ಯಾರ್ಥಿವೇತನ ಅಭಿಯಾನ ಕೈಗೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಇಲಾಖೆಯ ವೆಬ್ಸೈಟ್ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದು. 2024–25ನೇ ಸಾಲಿನಿಂದ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಆಧಾರ್ ಆಧಾರಿತಬಯೋಮೆಟ್ರಿಕ್ ಅಥೆಂಟಿಕೇಷನ್ ಅಂಡ್ ಇ–ಕೆವೈಸಿ ಕಡ್ಡಾಯವಾಗಿದೆ. ಈ ಸಂಬಂಧ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಈ ಪ್ರಕ್ರಿಯೆಯನ್ನು ಉಚಿತವಾಗಿ ಕೈಗೊಳ್ಳಲಾಗಿದ್ದು, ಎಲ್ಲಾ ಅರ್ಹ ಫಲಾನುಭವಿಗಳು ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಹಾಗೂ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಗೆ ಭೇಟಿ ನೀಡಿ ಎಲ್ಲಾ ಅರ್ಹ ಫಲಾನುಭವಿಗಳು ಸಕಾಲದಲ್ಲಿ ಇ–ಕೆವೈಸಿ ನೊಂದಣಿ ಮಾಡಿಸಲು ಕೋರಿದೆ. ಚಿತ್ರದುರ್ಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಯ ಎಲ್ಲಾ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ವಿದ್ಯಾರ್ಥಿಗಳಿಂದ ಅರ್ಜಿ ಪಡೆಯಲು ಹಾಗೂ ಇ–ಕೆವೈಸಿ ಮಾಡಲು ಫೆಸಿಲಿಟೇಷನ್ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

ಎಂಬಿಎ, ಎಂಸಿಎ ಪ್ರವೇಶಕ್ಕೆ ಆಫ್‌ಲೈನ್ ಮೂಲಕ ಅರ್ಜಿ

» ದಾವಣಗೆರೆ

ಪ್ರಸಕ್ತ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಎಂ.ಬಿ.ಎ, ಎಂ.ಸಿ.ಎ ಕೋರ್ಸ್‌ಗಳಲ್ಲಿ ಖಾಲಿ ಉಳಿದ ಸೀಟುಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಡಿ.24 ರೊಳಗೆ ಅರ್ಜಿಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.davangereuniversity.ac.in ಮೂಲಕ ಡೌನ್‌ಲೋಡ್ ಮಾಡಿಕೊಂಡು ಆಫ್‌ಲೈನ್ ಮೂಲಕ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಶುಲ್ಕವನ್ನು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿಗಳು, ಖಾತೆ ಸಂ:40619101261(ಐಈಖಅ ಕೋಡ್ ಖಃಐಓ0040869) ಸಂದಾಯವಾಗುವಂತೆ ಪಾವತಿಸಬೇಕು. ಅಥವಾ ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ ಇವರ ಹೆಸರಿನಲ್ಲಿ ಡಿ.ಡಿ. ಮೂಲಕ ಪಾವತಿಸಬೇಕು. ಹೆಚ್ಚಿನ ಮಾಹಿತಿಗಾಗಿ ವಿ.ವಿ.ವೆಬ್‌ಸೈಟ್ ವೀಕ್ಷಿಸಲು ವಿಶ್ವವಿದ್ಯಾನಿಲಯದ ಕುಲಸಚಿವರು ತಿಳಿಸಿದ್ದಾರೆ.

ಕಚೇರಿ ಸ್ಥಳಾಂತರ

» ಚಿತ್ರದುರ್ಗ

ಚಿತ್ರದುರ್ಗ ಉಪವಿಭಾಗ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿಯನ್ನು ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳ ಕಚೇರಿ ಜಿಲ್ಲಾ ಮಾಹಿತಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ತಾ ಲ್ಲೂ ಕ್ ವಿಸ್ತರಣಾಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಚಿತ್ರದುರ್ಗ ಉಪವಿಭಾಗ ಸರಸ್ವತಿ ಪುರಂ 1ನೇ ಮುಖ್ಯರಸ್ತೆ ಚಿತ್ರದುರ್ಗ ಈ ಕಚೇರಿಯನ್ನು ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರವು ಆಡಳಿತಾತ್ಮಕ ಕಾರಣಗಳಿಂದ ಪ್ರಸ್ತುತ ಜಿಲ್ಲಾ ಅಧಿಕಾರಿಗಳ ಕಚೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಶ್ರೀರಾಮ ಕಾಂಪ್ಲೆಕ್ಸ್, 1ನೇ ಮಹಡಿ, ಸ್ಟೇಡಿಯಂ ರಸ್ತೆ, ಚಿತ್ರದುರ್ಗ ಇಲ್ಲಿಗೆ ಸ್ಥಳಾಂತರಗೊಂಡಿರುವುದರಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಫಲಾನುಭವಿಗಳು ಕಚೇರಿಯ ವಿಳಾಸಕ್ಕೆ ಭೇಟಿ ನೀಡಿ, ಅಗತ್ಯ ಮಾಹಿತಿ, ನೆರವು ಪಡೆಯಬಹುದು.

ಅಂಗವಿಕಲರಿಗೆ ಪ್ರತಿ ವರ್ಷ ನನ್ನ ಅನುದಾನದಲ್ಲಿ 20 ಲಕ್ಷ ರೂ. ಮೀಸಲು: ಶಾಸಕ ವಿರೇಂದ್ರ ಪಪ್ಪಿ

» ಚಿತ್ರದುರ್ಗ

ಅಂಗವಿಕಲರಿಗೆ ಪ್ರತಿ ವರ್ಷವೂ ನನ್ನ ಅನುದಾನದಲ್ಲಿ ಇಪ್ಪತ್ತು ಲಕ್ಷ ರೂ.ಗಳನ್ನು ಈ ಕ್ಷಣದಿಂದಲೆ ಮೀಸಲಿಡುತ್ತೇನೆಂದು ಶಾಸಕ ಕೆ.ಸಿ.ವೀರೇಂದ್ರಪಪ್ಪಿ ವಾಗ್ದಾನ ಮಾಡಿದರು.

ಜಿಲ್ಲಾ ಅಂಗವಿಕಲರ ಕ್ಷೇಮಾಭ್ಯುದಯ ಸಂಘ, ಎಂ.ಆರ್.ಡಬ್ಲ್ಯೂ., ಯು. ಆರ್.ಡಬ್ಲ್ಯು. ಪಿ.ಆರ್.ಡಬ್ಲ್ಯು. ವತಿಯಿಂದ ಐ.ಎಂ.ಎ.ಹಾಲ್‌ನಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ವಸತಿ ನಿಗಮಗಳ ಯೋಜನೆಯಲ್ಲಿ ಮೀಸಲಾತಿ, ಗ್ರಾಮ ಪಂಚಾಯಿತಿಯಲ್ಲಿ ಶೇ.5 ರಷ್ಟು ಅನುದಾನ ಮೀಸಲಿಡುತ್ತೇನೆ. ಸರ್ಕಾರ ನಿಮ್ಮ ಜೊತೆಗಿದೆ. ವಿಕಲಚೇತನರೆಂಬ ಕೀಳರಿಮೆ ತೊರೆದು ಸಮಾಜದ ಮುಖ್ಯವಾಹಿನಿಗೆ ಬರುವಂತೆ ಅಂಗವಿಕಲರಿಗೆ ಕರೆ ನೀಡಿದರು.

ಪ್ರತಿ ಮತ ಕ್ಷೇತ್ರದಲ್ಲಿ ಶೇ. 5 ರಷ್ಟು ವಿಕಲಚೇತನರಿದ್ದಾರೆ. ಆದಾರ್ ಯೋಜನೆಯಲ್ಲಿ ಒಂದು ಲಕ್ಷ ರೂ.ಸಾಲ ಸಿಗುತ್ತದೆ. ಅದರಲ್ಲಿ ಐವತ್ತು ಸಾವಿರ ರೂ.ಸಬ್ಸಡಿ.ಲ್ಯಾಪ್‌ಟಾಪ್, ಹೊಲಿಗೆ ಯಂತ್ರ, ಅಂಧರಿಗೆ ಸ್ಮಾರ್ಟ್ ಫೋನ್‌ಗಳನ್ನು ನೀಡಲಾಗುತ್ತಿದೆ. ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಸ್ವ–ಉದ್ಯೋಗಿಗಳಾಗಿ. ಹೆಸರಾಂತ ನಾಟಕಕಾರ ಶೇಕ್ಸ್‌ಪಿಯರ್ ಹಾಗೂ ವಾಸ್ಕೋಡಿಗಾಮ ಇವರುಗಳು ಅಂಗವಿಕಲರಾಗಿದ್ದರು. ನೂನ್ಯತೆ ಮರೆತು ಎಲ್ಲರಂತೆ ಬದುಕಿ. ನಿಮ್ಮ ಏನೆ ಸಮಸ್ಯೆಗಳಿದ್ದರೂ ನೇರವಾಗಿ ನನ್ನ ಗಮನಕ್ಕೆತನ್ನಿ.ನನ್ನಹಂತದಲ್ಲಿಆಗುವುದನ್ನು ಬಗೆಹರಿಸುತ್ತೇನೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ವಿಕಲಚೇತನರಿಗೆ ಸಮುದಾಯ ಭವನ ಕಟ್ಟಿಸಿಕೊಡುತ್ತೇನೆ. ಮಾಳಪ್ಪನಹಟ್ಟಿಯಲ್ಲಿರುವ ಅಂಧರ ಶಾಲೆಯಲ್ಲಿ ಪ್ರತಿ ವರ್ಷವೂ ನನ್ನ ಹುಟ್ಟುಹಬ್ಬ ಆಚರಿಸಿಕೊಂಡು ಅವರೊಟ್ಟಿಗೆ ಕೆಲವು ಕಾಲ ಕಳೆಯುತ್ತೇನೆ. ಭಿಕ್ಷಾಟನೆ ಮಾಡುವುದನ್ನು ಬಿಟ್ಟು ಸಮಾಜದೊಂದಿಗೆ ಎಲ್ಲರೊಡನೆ ಬೆರೆತು ಸ್ವಂತ ಕಾಲ ಮೇಲೆ ನಿಲ್ಲುವಂತಾಗಿ ಎಂದು ವಿಕಲಚೇತನರಿಗೆ ತಿಳಿಸಿದರು.

ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡಿ ಅಂಗವಿಕಲರಿಗೆ ಅನುಕಂಪ ಬೇಡ. ಅವಕಾಶ ಸಿಗಬೇಕು. ಸಾಮಾನ್ಯರಿಗಿಂತ ವಿಕಲಚೇತನರಲ್ಲಿ ವಿಶೇಷವಾದ ಸಾಮರ್ಥ್ಯವಿರುತ್ತದೆ. ಅಂಗವಿಕಲರಿಗೆ ಕೇವಲ ಸರ್ಕಾರದ ಸಹಾಯ ಸಿಕ್ಕರೆ ಸಾಲದು. ಸಾರ್ವಜನಿಕರು, ವಿವಿಧ ಸಂಘಟನೆಗಳ ಜವಾಬ್ದಾರಿಯೂ ಇದೆ.

ಸಬ್ಸಡಿ ಜೊತೆ ಬ್ಯಾಂಕ್‌ಗಳಲ್ಲಿ ಅಂಗವಿಕಲರಿಗೆ ಸಾಲ ಸಿಗುವ ವ್ಯವಸ್ಥೆ ಮಾಡುವಂತೆ ಶಾಸಕರಲ್ಲಿ ಮನವಿ ಮಾಡಿದರು.

ದಲಿತ ಮುಖಂಡ ಬಿ.ರಾಜಣ್ಣ ಮಾತನಾಡುತ್ತ ಅಂಗವಿಕಲರಿಗೆ ಸರ್ಕಾರಿ ನೌಕರಿ ಸಿಗಬೇಕು. ಚಿತ್ರದುರ್ಗದಲ್ಲಿ ಕೈಗಾರಿಕಾ ಘಟಕ ಪ್ರಾರಂಭಿಸಿದರೆ ವಿಕಲಚೇತರಿಗೆ ಉದ್ಯೋಗ ದೊರಕುತ್ತದೆ. ಹಾಗಾಗಿ ಕೈಗಾರಿಕೆ ಕಡೆ ಹೆಚ್ಚಿನ ಗಮನ ಕೊಡಬೇಕೆಂದು ಶಾಸಕ ಕೆ.ಸಿ.ವೀರೇಂದ್ರಪಪ್ಪಿರವರಲ್ಲಿ ಅಂಗವಿಕಲರ ಪರವಾಗಿ ವಿನಂತಿಸಿದರು.

ಲೇಖಕ ಹೆಚ್.ಆನಂದಕುಮಾರ್ ಮಾತನಾಡಿ ಅಂಗವಿಕಲರಿಗೆ ಅನುಕಂಪ ತೋರುವ ಬದಲು ಸ್ವಾವಲಂಬಿಗಳಾಗಿ ಬದುಕುವ ಅವಕಾಶ ಕಲ್ಪಿಸಬೇಕು. ಸರ್ಕಾರದಿಂದ ಸಾಕಷ್ಟು ನೆರವು ದೊರಕುತ್ತಿದೆ. ಎಲ್ಲವನ್ನು ಬಳಸಿಕೊಂಡು ಆತ್ಮಸ್ಥೈರ್ಯದಿಂದ ಬದುಕುವಂತೆ ಹೇಳಿದರು.

ಸೆಲ್ಕೋ ಫೌಂಡೇಶನ್‌ನ ಮಂಜುನಾಥ್ ಭಾಗವತ್ ಮಾತನಾಡುತ್ತ ಅಂಗವಿಕಲರು ಸಮಾಜದಮುಖ್ಯವಾಹಿನಿಗೆಬರಬೇಕಾದರೆ ಸರ್ಕಾರಿ ನೌಕರಿ ಸಿಗಬೇಕು, ವಿಕಲಚೇತನರು ಸ್ವ–ಉದ್ಯೋಗ ಕೈಗೊಳ್ಳಲು ಮುಂದೆ ಬಂದರೆ ಸೆಲ್ಕೋ ಫೌಂಡೇಶನ್‌ನಿಂದ ಶೇ. 50 ರಷ್ಟು ಹಣಕಾಸಿನ ನೆರವು ನೀಡುತ್ತೇವೆ. ಗ್ರಾಮ ಪಂಚಾಯಿತಿಯಲ್ಲಿ ಹದಿನೈದನೆ ಹಣಕಾಸು ಯೋಜನೆಯಡಿ ನೆರವಿದೆ. ಸಿಗಬೇಕು ಅಷ್ಟೆ ಎಂದರು.

ಜಿಲ್ಲಾ ಅಂಗವಿಕಲರ ಕ್ಷೇಮಾಭ್ಯುದಯ ಸಂಘದ ಜಿಲ್ಲಾಧ್ಯಕ್ಷ ನಾಗರಾಜ್ ಟಿ. ಪ್ರಧಾನ ಕಾರ್ಯದರ್ಶಿ ಎಂ.ಎಸ್.ಪಾಪಣ್ಣ, ಕಾರ್ಯದರ್ಶಿ ಕೆ.ಆನಂದ್, ಎನ್. ಮೈಲಾರಪ್ಪ ಟಿ.ಕೆ.ವೆಂಕಟೇಶ್, ಭಾನುಕಿರಣ್, ಅಜ್ಜಪ್ಪ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ನ್ಯಾಯವಾದಿ ಪ್ರತಾಪ್‌ಜೋಗಿ, ಬಡಗಿ ಕೆಲಸಗಾರರ ಸಂಘದಅಧ್ಯಕ್ಷ ಎ.ಜಾಕಿರ್‌ಹುಸೇನ್, ವಾಗೀಶ್, ಜಾನಪದ ಜಾಗೃತಿ ಪರಿಷತ್ ಅಧ್ಯಕ್ಷ ಹೆಚ್.ಪ್ಯಾರೆಜಾನ್ ವೇದಿಕೆಯಲ್ಲಿದ್ದರು.ವಿಕಲಚೇತನರಿಗೆ ವಿವಿಧ ಸಲಕರಣೆಗಳನ್ನು ವಿತರಿಸಲಾಯಿತು.

ಆರ್ಥಿಕತೆಗೆ ರೈತರು ಮಹತ್ವದ ಕೊಡುಗೆ ನೀಡಿದ್ದಾರೆ

» ಹೊಸದುರ್ಗ

ಮಾಜಿ ಪ್ರಧಾನಿ ಚೌದರಿ ಚರಣ್ ಸಿಂಗ್ ಅವರು ರೈತರ ಪರವಾಗಿ ಹಲವಾರು ನೀತಿಗಳನ್ನು ಪರಿಚಯಿಸುವ ಮೂಲಕ ದೇಶದ ರೈತ ಸಮುದಾಯದ ಉನ್ನತಿಗೆ ಶ್ರಮಿಸಿದ ಅವರು ಭಾರತೀಯ ಕೃಷಿ ಸನ್ನಿವೇಶವನ್ನು ಉನ್ನತೀಕರಿಸಿದರು, ಹಾಗೂ ರೈತ ಅನ್ನದಾತರು, ಭಾರತದ ಆರ್ಥಿಕತೆಗೆ ರೈತರು ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಸಹಾಯಕ ಕೃಷಿ ನಿರ್ದೇಶಕ ಸಿ.ಎಸ್ ಈಶ ತಿಳಿಸಿದರು.

ಪಟ್ಟಣದ ಕೃಷಿ ಇಲಾಖೆಯ ಆವರಣದಲ್ಲಿ ಕೃಷಿ ಇಲಾಖೆ ಹಾಗೂ ತಾಲ್ಲೂಕು ಕೃಷಿಕ ಸಮಾಜದ ವತಿಯಿಂದ ಆಯೋಜಿಸಲಾಗಿದ್ದ ರೈತರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ರೈತರ ಏಳಿಗೆಗಾಗಿ ರೈತರ ಹಿತದೃಷ್ಟಿಯಿಂದ ಮಾಡಿದ ಕೆಲಸದಿಂದಾಗಿ ಭಾರತ ಸರ್ಕಾರವು 2001 ರಲ್ಲಿ ಡಿಸೆಂಬರ್ 23 ರಂದು ರೈತರ ದಿನಾಚರಣೆಯನ್ನು ಆಚರಿಸಲು ನಿರ್ಧರಿಸಿತು ಎಂದರು.ಕಾರ್ಯಕ್ರಮವನ್ನ ಉದ್ಘಾಟಿಸಿದ ಕಾಂಗ್ರೇಸ್ ಪಕ್ಷದ ಯುವ ಮುಖಂಡ ಬಿ ಜಿ ಅರುಣ್ ಮಾತನಾಡಿ ಕರ್ನಾಟಕ ರಾಜ್ಯದಲ್ಲಿಯೇ ಹೆಚ್ಚಾಗಿನಮ್ಮತಾಲ್ಲೂಕಿನರೈತರುಸಿರಿಧಾನ್ಯಗಳನ್ನು ಹೆಚ್ಚಾಗಿ ಬೆಳೆಯುತ್ತಿದ್ದಾರೆ, ಆದ್ದರಿಂದ ನಮ್ಮ ತಾಲ್ಲೂಕಿಗೆ ಸಿರಿಧಾನ್ಯಗಳ ನಾಡು ಎನ್ನುವ ಹೆಸರು ಬಂದಿದ್ದು ರೈತರು ಬೆಳೆಗಳನ್ನು ಬೆಳೆಯುವುದು ಮಾತ್ರವಲ್ಲದೇ ಅವುಗಳನ್ನು ಮೌಲ್ಯವರ್ಧನೆ ಮಾಡಿ ತಾವೇ ಉಪಯೋಗಿಸಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು, ಹಾಗೂ ರೈತರು ಇಲಾಖೆ ಕೃಷಿ ವಿಶ್ವ ವಿದ್ಯಾಲಯಗಳ ನವೀನ ತಾಂತ್ರಿಕತೆಗಳನ್ನು ಅಳವಡಿಸಿಕೊಂಡು, ಹೆಚ್ಚಿನ ಇಳುವರಿ ಬೆಳೆಯುವುದರ ಮೂಲಕ ಆರ್ಥಿಕವಾಗಿ ಸಧೃಡರಾಬೇಕು ಎಂದು ಕರೆ ನೀಡಿದರು.

ಕೃಷಿ ವಿಜ್ಞಾನ ಕೇಂದ್ರ ಬಬ್ಬೂರು ಫಾರಂನ ವಿಜ್ಞಾನಿ ಡಾ. ವಿಜಯ್ ದಾನರೆಡ್ಡಿ ಸ್ಥಳೀಯವಾಗಿ ಬೆಳೆಯುವ ಬೆಳೆಗಳಿಗೆ ತಗುಲುವ ಕೀಟಗಳ ಹಾನಿಯ ಲಕ್ಷಣ ಮತ್ತು ಅದರ ನಿಯಂತ್ರಣ ಕ್ರಮಗಳ ಕುರಿತು ರೈತರೊಂದಿಗೆ ಚರ್ಚಿಸಿದರು.ಸೆಲ್ಕೊ ಸೋಲಾರ್ ಸಂಸ್ಥೆಯ ವ್ಯವಸ್ಥಾಪಕ ಅಜಯ್ ತಮ್ಮಲ್ಲಿ ದೊರೆಯುವ ಉಪಕರಣಗಳ ಬಗ್ಗೆ ರೈತರಿಗೆ ಆಗುವ ಅನುಕೂಲಗಳನ್ನು ತಿಳಿಸಿದರು.

ಕೃಷಿಕ ಸಮಾಜದ ಅಧ್ಯಕ್ಷರಾದ ಚಂದ್ರಶೇಖರಪ್ಪ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ರೈತ ಮುಖಂಡರಾದ ಮಹೇಶ್ವರಪ್ಪ, ಬೋರೇಶ್, ಕೃಷಿ ಅಧಿಕಾರಿಗಳು, ಆತ್ಮ ಸಿಬ್ಬಂದಿಗಳು, ಎಸ್. ಹೆಚ್.ಎಂ ಸಿಬ್ಬಂದಿ ಮತ್ತು ಕೃಷಿ ಇಲಾಖೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

ವಿದ್ಯಾರ್ಥಿಗಳ ಮೈಂಡ್‌ಗೆ ಎಸ್.ಎನ್. ಮಾಸ್ಟರ್ ಮೈಂಡ್ ಪರೀಕ್ಷೆ

» ಹೊಸದುರ್ಗ

ಪಟ್ಟಣದ ಎಸ್. ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಎಸ್.ನಿಜಲಿಂಗಪ್ಪ ಇಂಡಿಪೆಂಡೆಂಟ್ ಪಿ.ಯು ಕಾಲೇಜಿನ ವತಿಯಿಂದ ಆಯೋಜಿಸಿದ್ದ ಎಸ್. ಎನ್. ಮಾಸ್ಟರ್ ಮೈಂಡ್ 4 ನೇ ವರ್ಷದ ಸ್ಕಾಲರ್ ಶಿಪ್ ಪರೀಕ್ಷೆಗೆ ಹೊಸದುರ್ಗದ 58 ಪ್ರೌಢಶಾಲೆಗಳ 1152 ವಿದ್ಯಾರ್ಥಿಗಳು ಪರೀಕ್ಷೆ ಬರೆದರು. 'ಪಿ.ಸಿ.ಎಂ.ಬಿ ವಿಷಯಕ್ಕೆ ಸಂಬಂಧಿಸಿದಂತೆ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಓಎಂಆರ್ ಆಧಾರಿತ ವಿಜ್ಞಾನ ಮತ್ತು ಗಣಿತ ವಿಷಯಕ್ಕೆ ಸಂಬಂಧಿಸಿದಂತೆ 120 ಅಂಕಗಳಿಗೆ ಪರೀಕ್ಷೆ ಆಯೋಜಿಸಲಾಗಿತ್ತು.ಈ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಆಂಗ್ಲ ಮಾಧ್ಯಮ ಮತ್ತು ಕನ್ನಡ ಮಾಧ್ಯಮದಲ್ಲಿ ಪ್ರಥಮ, ದ್ವಿತೀಯ ತೃತೀಯ ಸ್ಥಾನ ಗಳಿಸಿದ ವಿದ್ಯಾರ್ಥಿಗಳಿಗೆ ಕ್ರಮವಾಗಿ ಪ್ರತ್ಯೇಕವಾಗಿ 50,000, 30,000 ಹಾಗೂ 20,000 ದಂತೆ ಗಿಫ್ಟ್ ಓಚರ್ ಗಳನ್ನು ನೀಡಲಾಗುವುದು (ಪಿಯುಸಿ ಗೆ ಇದೇ ಕಾಲೇಜಿಗೆ ಪ್ರವೇಶ ಪಡೆದಲ್ಲಿ ಗಿಫ್ಟ್ ಓಚರ್ ನ್ನು ಪರಿಗಣಿಸಲಾಗುವುದು.') ಸುಮಾರು 40 ವಿದ್ಯಾರ್ಥಿಗಳಿಗೆ ಕೊಡಲಾಗುವುದು. ವಿಶೇಷವಾಗಿ ಪ್ರತಿ ಶಾಲೆಯ ಟಾಪರ್ ಗಳಿಗೆ 10,000 ಗಳ ಓಚರ್ ನೀಡಲಾಗುವುದು.

ಪ್ರಮುಖ ಸುದ್ದಿ

ಶರಣರು, ತನ್ನೋಲಕ ಮಾನವೀಯತೆಯ ಚಳುವಳಿಗೆ ಹೊಸ ವ್ಯಾಖ್ಯಾನವನ್ನೆ ಬರೆದರು: ಮಾತೆಬಸವಾಂಜಲಿ

» ಹೊಸದುರ್ಗ

ಸ್ಥಾವರ ಎಂದರೆ ಅಳಿವು, ಬಿದ್ದು ಹೋಗುವಂತಹುದು, ನಶಿಸಿ ಹೋಗುವುದು ಎಂದರ್ಥವಾದರೆ, ಯಾವುದು ನಾಶವಾಗುವುದಿಲ್ಲವೋ ಅದು ಜಂಗಮ, ನಮ್ಮ ದೇಹ ಸ್ಥಾವರ, ಆತ್ಮ ಜಂಗಮ, ಇದಕ್ಕೆ ನಾವು ಬಸವ ತತ್ವದಲ್ಲಿ ಸ್ಥಾವರಕ್ಕೆ ಅಳಿವುಂಟು ಜಂಗಮಕ್ಕೆ ಅಳಿವಿಲ್ಲ ಎಂದು ಹೇಳುವುದು, ಶರಣರ ಚಳುವಳಿ ಎನ್ನುವುದು ನಿಜದ ನ